ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೬

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : ೦೧ನೇ ಮಾರ್ಚ್, ೨೦೧೬

---

## ಸಮೂಹ – II

೧. ಇಂಧನ ಸಚಿವರು.

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ತೆಂಗಿನ ಮರದಿಂದ ನೀರಾ ಇಳಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧ (೦೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗಿನ ಮರದಿಂದ ನೀರಾ ಇಳಿಸುವ ಬಗ್ಗೆ ಕಳೆದ ಆಯವ್ಯಯದಲ್ಲಿ ವಿಧೇಯಕವನ್ನು ಮಂಡಿಸಲಾಗುವುದೆಂದು ಸರ್ಕಾರ ಘೋಷಣೆ ಮಾಡಿರುವುದು ನಿಜವೇ;

(ಆ) ಹಾಗಿದ್ದಲ್ಲಿ; ವಿಧೇಯಕವನ್ನು ಮಂಡಿಸದಿರುವುದಕ್ಕೆ ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಮದ್ದೂರು ತಾಲ್ಲೂಕು ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ನಡೆದಿರುವ ಅವ್ಯವಹಾರ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨ (೧೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮದ್ದೂರು ತಾಲ್ಲೂಕು ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಕೇಂದ್ರ ಸರ್ಕಾರದ ೨೦೦೮ ಮತ್ತು ರಾಜ್ಯ ಸರ್ಕಾರದ ೨೦೦೬ ಹಾಗೂ ೨೦೧೨ರ ಸಾಲ ಮನ್ನಾ ಯೋಜನೆಯಲ್ಲಿ ನಡೆದಿರುವ ಅವ್ಯವಹಾರ ಕುರಿತು ಸಹಕಾರ ಸಂಘಗಳ ನಿಯಮ ೬೪ರ ಅಡಿ ತನಿಖೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ತನಿಖೆಯು ಯಾವ ಹಂತದಲ್ಲಿದೆ; ಈ ವರೆಗಿನ ತನಿಖೆಯಲ್ಲಿ ಕಂಡು ಬಂದಿರುವ ಅವ್ಯವಹಾರಗಳ ಬಗ್ಗೆ ವಿವರ ನೀಡುವುದು;

(ಇ) ಸದರಿ ಸಂಘದ ಆಡಳಿತಾಧಿಕಾರಿಯ ಅವಧಿ ಮುಗಿದಿದ್ದರೂ ಸಹ ಆಡಳಿತಾಧಿಕಾರಿಯ ನೇಮಕವಾಗದ ಇರುವುದರಿಂದ ಮತ್ತು ಹಾಲಿ ಸಂಘದ ಕಾರ್ಯದರ್ಶಿಗಳು ರೈತರಿಗೆ ಹೆಚ್ಚುವರಿ ಸಾಲವನ್ನು ಮಂಜೂರು ಮಾಡಿದ ನಂತರ ಮಂಜೂರಾದ ಹೆಚ್ಚುವರಿ ಸಾಲದ ಹಣವನ್ನು ರೈತರಿಗೆ ನೀಡದೆ, ಹಲವು ದಿನಗಳಿಂದ ಕಛೇರಿಗೆ ಹಾಜರಾಗದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸಂಘದ ವತಿಯಿಂದ ಕ್ಯಾಲ್ಸಿಮ್ಯಾಕ್ಸ್ ಮತ್ತು ಡಿ.ಎನ್.ಪಿ ಹಾವಯವ ಗೊಬ್ಬರವನ್ನು ಸೂಪರ್ ಪಾಸ್ಪೇಟ್ ಗೊಬ್ಬರ ಎಂದು ರೈತರಿಗೆ ಮಾರಾಟ ಮಾಡಿರುವ ಪ್ರಕರಣಗಳಲ್ಲಿ ಕೈಗೊಂಡಿರುವ ಕ್ರಮಗಳ ಹಾಗೂ ಸಂಘದ ಆಪಾದಿತ ಅಧಿಕಾರಿ ಮತ್ತು ನೌಕರರ ವಿರುದ್ಧ ಹೂಡಲಾಗಿರುವ ಕ್ರಿಮಿನಲ್ ಮೊಕದ್ದಮೆಯ ಪ್ರಗತಿ ಏನು? (ವಿವರ ನೀಡುವುದು)

## ಸೂರ್ಯನ ಶಾಖದಿಂದ ವಿದ್ಯುತ್‌ನ್ನು ಉತ್ಪಾದಿಸುವ ಯೋಜನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):-**

೩ (೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರವು ಪ್ರತಿ ತಾಲ್ಲೂಕಿಗೆ ಬೇಕಾಗುವ ವಿದ್ಯುತ್‌ನ್ನು ಅದೇ ತಾಲ್ಲೂಕಿನಲ್ಲಿ ಸೂರ್ಯನ ಶಾಖದಿಂದ (Solar Power) ಉತ್ಪಾದಿಸುವ ಯೋಜನೆ ಹೊಂದಿದೆಯೇ;

(ಆ) ಇದ್ದಲ್ಲಿ, ಇದನ್ನು ಅನುಷ್ಠಾನಗೊಳಿಸಲು ಕೈಗೊಳ್ಳಲಾಗಿರುವ ಕ್ರಮವೇನು;

(ಇ) ಈ ಯೋಜನೆಯು ರೂಪುರೇಷೆಗಳೇನು? (ಮಾಹಿತಿ ಒದಗಿಸುವುದು)

## ರಾಜ್ಯದ ಕಬ್ಬು ಬೆಳೆಗಾರರಿಗೆ ಬಾಕಿ ಉಳಿದಿರುವ ಹಣ ಪಾವತಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):-**

೪ (೨೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಕಬ್ಬು ಬೆಳೆಗಾರರಿಗೆ ಈವರೆಗೆ ಪಾವತಿಸದೇ ಬಾಕಿ ಉಳಿದಿರುವ ಹಣವೆಷ್ಟು;

(ಆ) ಬಾಕಿ ಉಳಿದಿರುವ ಹಣದ ಪಾವತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರೈತರಿಗೆ ಹಣ ಪಾವತಿ ಮಾಡದೇ ಇರುವ ಸಕ್ಕರೆ ಕಾರ್ಖಾನೆಗಳಿಂದ ಜಪ್ತಿ ಮಾಡಿಕೊಂಡಿರುವ ಸಕ್ಕರೆಯ ಪ್ರಮಾಣವೆಷ್ಟು;

(ಈ) ಈ ರೀತಿ ಜಪ್ತಿ ಮಾಡಿಕೊಂಡಿರುವ ಸಕ್ಕರೆಯನ್ನು ಹರಾಜು ಮುಖಾಂತರ ಮಾರಾಟ ಮಾಡಿ ರೈತರಿಗೆ ಬಾಕಿ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

## "ಹೊಸ ಬೆಳಕು" ಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):-**

೫ (೨೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದಿಂದ "ಹೊಸ ಬೆಳಕು" ಯೋಜನೆಯನ್ವಯ ಈವರೆಗೆ ಎಷ್ಟು ಎಲ್.ಇ.ಡಿ. ಬಲ್ಬುಗಳನ್ನು ಸಾರ್ವಜನಿಕರಿಗೆ ವಿತರಿಸಲಾಗಿದೆ;

(ಆ) ಸರ್ಕಾರ ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಈ ಯೋಜನೆಯನ್ನು ಅಳವಡಿಸಲು ಸರ್ಕಾರ ಯೋಜಿಸಿದೆಯೇ;

(ಇ) ಈ ಯೋಜನೆ ಅಡಿಯಲ್ಲಿ ವಿತರಿಸುವ ಬಲ್ಬುಗಳ ಮೇಲೆ ಉತ್ಪಾದಕರ ಹೆಸರು ಹಾಗೂ ಉತ್ಪಾದಿಸಿರುವ ದಿನಾಂಕ ಮತ್ತು ಉಪಭೋಗದ ಗರಿಷ್ಠ ಅವಧಿಯನ್ನು ಒಳಗೊಂಡ ಇತರೆ ಮಾಹಿತಿಗಳನ್ನು ಬಲ್ಬುಗಳ ಮೇಲೆ ಅಥವಾ ಅದರ ಪ್ಯಾಕೆಟ್ಟುಗಳ ಮೇಲೆ ಮುದ್ರಿಸದಿರಲು ಕಾರಣವೇನು?

## ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಕೊಡಲಾದ ಪರಿಹಾರದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):-**

೬ (೨೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ೧೨ ತಿಂಗಳುಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು;

(ಆ) ಕಳೆದ ೧೨ ತಿಂಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಕೊಡಲಾದ ಪರಿಹಾರದ ಹಣವೆಷ್ಟು;

(ಇ) ರೈತರ ಸರಣಿ ಆತ್ಮಹತ್ಯೆ ಕಾರಣಗಳನ್ನು ಅರಿಯಲು ಮತ್ತು ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸರ್ಕಾರ ಯಾವುದಾದರು ಸತ್ಯಶೋಧನಾ ವರದಿಯನ್ನು ತಯಾರಿಸಿದೆಯೇ; ವಿವರ ನೀಡುವುದು)

(ಈ) ರೈತನ ಜೀವನ ಸುಧಾರಿಸಲು ಅನುಕೂಲವಾಗುವಂತೆ ಮತ್ತು ರೈತ ಆತ್ಮಹತ್ಯೆಯಂತಹ ಕಠೋರ ಕ್ರಮಕ್ಕೆ ಮೊರೆ ಹೋಗದಿರಲು ಸರ್ಕಾರ ಏನು ಕಾರ್ಯಕ್ರಮ ಹಮ್ಮಿಕೊಂಡಿದೆ?

## ಉಡುಪಿಯ ಪುಷ್ಪ ಹರಾಜು ಕೇಂದ್ರ ಕಾರ್ಯಾರಂಭ ಮಾಡದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೭ (೧೪೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೦೯-೧೦ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಉಡುಪಿ ಜಿಲ್ಲೆಯಲ್ಲಿ ಪುಷ್ಪ ಹರಾಜು ಕೇಂದ್ರ ಕಾಮಗಾರಿ ಪೂರ್ಣಗೊಳಿಸಲಾಗಿದೆಯೇ; ಹೌದಾದಲ್ಲಿ, ಪೂರ್ಣಗೊಂಡಿದ್ದು ಯಾವಾಗ;

(ಆ) ಉಡುಪಿಯ ಪುಷ್ಪ ಹರಾಜು ಕೇಂದ್ರವು ಸಂಬಂಧಿತ ಇಲಾಖೆಗೆ ಹಸ್ತಾಂತರಗೊಂಡಿದೆಯೇ; (ವಿವರ ಒದಗಿಸುವುದು)

(ಇ) ಸದರಿ ಪುಷ್ಪ ಹರಾಜು ಕೇಂದ್ರದ ಕಾರ್ಯ ಚಟುವಟಿಕೆಗೆ ಸಂಬಂಧಿಸಿದಂತೆ ಅಗತ್ಯ ಹುದ್ದೆ ಮಂಜೂರಾತಿ ಮತ್ತು ನೇಮಕಾತಿ ಆಗಿರುತ್ತದೆಯೇ;

(ಈ) ಸದರಿ ಪುಷ್ಪ ಹರಾಜು ಕೇಂದ್ರವು ಕಾರ್ಯಾರಂಭಗೊಂಡಿದೆಯೇ ಇಲ್ಲವಾದಲ್ಲಿ ಕಾರ್ಯಾರಂಭಕ್ಕಿರುವ ತೊಡಕುಗಳೇನು;

(ಉ) ಸ್ಥಳೀಯ ರೈತರ ಬೇಡಿಕೆಯಂತೆ ಉಡುಪಿ ಪುಷ್ಪ ಹರಾಜು ಕೇಂದ್ರವನ್ನು ಶೀಘ್ರವಾಗಿ ಪ್ರಾರಂಭಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಂಡಿದೆ?

# ಹೊಸದಾಗಿ ಸೃಜಿಸಲಾದ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೮ (೩೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊಸದಾಗಿ ಸೃಜನೆಯಾದ ಮತ್ತು ಮೇಲ್ದರ್ಜೆಗೆ ಏರಿಸಿದ ನಗರ ಸ್ಥಳೀಯ ಸಂಸ್ಥೆಗಳಿಗೆ ಒಂದು ವರ್ಷ ಕಳೆದರೂ ಚುನಾವಣೆ ನಡೆಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗಾಗಲೇ ಅನೇಕ ಬಾರಿ ಸದನದಲ್ಲಿ ಪ್ರಸ್ತಾಪಿಸಲಾಗಿದ್ದು ನಗರ ಸ್ಥಳೀಯ ಸಂಸ್ಥೆ ಸೃಜನೆಯಾದ ೬ ತಿಂಗಳ ಒಳಗೆ ಚುನಾವಣೆ ನಡೆಸಲಾಗುವುದು ಎನ್ನುವ ಭರವಸೆಯನ್ನು ಸರ್ಕಾರ ನೀಡಿದ್ದರೂ ಚುನಾವಣೆ ನಡೆಸದೇ ಇರುವುದಕ್ಕೆ ಕಾರಣಗಳೇನು;

(ಇ) ಹೀಗೆ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸದೇ ಇರುವುದು ಪ್ರಜಾಪ್ರಭುತ್ವದ ಆಶಯಕ್ಕೆ ವಿರುದ್ಧವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಎಲ್ಲಾ ಹೊಸ ನಗರ ಸ್ಥಳೀಯ ಸಂಸ್ಥೆಗಳಿಗೆ ಯಾವಾಗ ಚುನಾವಣೆ ನಡೆಸಲಾಗುವುದು; ಈ ಬಗ್ಗೆ ಸರ್ಕಾರದ ನಿಲುವೇನು ಈ ನಿಟ್ಟಿನಲ್ಲಿ ಯಾವ ಯಾವ ಕ್ರಮಕೈಗೊಳ್ಳಲಾಗಿದೆ?

## "ಪಶುಭಾಗ್ಯ" ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೯ (೩೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪಶು ಸಂಗೋಪನೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು; (ವಿವರ ನೀಡುವುದು)

(ಆ) ಪಶು ಸಂಗೋಪನಾ ಇಲಾಖೆಯ ಕಾರ್ಯಕ್ರಮಗಳಿಗೆ ಹಂಚಿಕೆಯಾದ ಮತ್ತು ಖರ್ಚಾದ ಅನುದಾನವೆಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಪಶು ಭಾಗ್ಯ ಯೋಜನೆಯ ವಿವರಗಳೇನು ಫಲಾನುಭವಿಗಳಿಗೆ ನಿಗಧಿಪಡಿಸಿರುವ ಅರ್ಹತೆಗಳೇನು;

(ಈ) ಇದುವರೆಗೆ ಪಶುಭಾಗ್ಯ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು? (ಸಂಪೂರ್ಣ ಜಿಲ್ಲಾವಾರು ವಿವರ ಒದಗಿಸುವುದು)

## ಸೌರ ಮತ್ತು ಪವನ ವಿದ್ಯುತ್ ಉತ್ಪಾದನಾ ಘಟಕಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೦ (೩೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸೌರ ವಿದ್ಯುತ್ ಮತ್ತು ಪವನ ವಿದ್ಯುತ್‌ಗಳನ್ನು ಉತ್ಪಾದಿಸಿ ಗೃಹ ಬಳಕೆಗೆ ಮತ್ತು ಸಣ್ಣ ಪ್ರಮಾಣದಲ್ಲಿ ವಿದ್ಯುತ್ ನಿಗಮಗಳಿಗೆ ನೀಡುವ ಬಗ್ಗೆ ರೂಪಿಸಿರುವ ಯೋಜನೆಗಳೇನು;

(ಆ) ರಾಜ್ಯದ ವಿದ್ಯುತ್ ಅಭಾವವನ್ನು ನೀಗಿಸುವ ಮತ್ತು ನವೀಕರಿಸಬಹುದಾದ ಇಂಧನ ಬಳಕೆಗೆ ಉತ್ತೇಜಿಸುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಸರ್ಕಾರಿ ಕಛೇರಿಗಳಲ್ಲಿ ಮೇಲ್ಛಾವಣಿಗಳಲ್ಲಿ ಸೌರ ಫಲಕ ಅಳವಡಿಸಿ ವಿದ್ಯುತ್ ಉತ್ಪಾದಿಸುವ ಬಗ್ಗೆ ಸರ್ಕಾರದ ನಿಲುವೇನು? (ವಿವರ ಒದಗಿಸುವುದು)

## ಆಗುಂಬೆ ಘಾಟ್ ಸುರಂಗ ಮಾರ್ಗ ನಿರ್ಮಾಣದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೧ (೩೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರಾವಳಿ ಜಿಲ್ಲೆ ಮತ್ತು ರಾಜ್ಯದ ರಾಜಧಾನಿಯ ನಡುವಿನ ಆಗುಂಬೆ ಘಾಟ್ ಸುರಂಗ ಮಾರ್ಗ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿರುವುದು ನಿಜವೇ; ಹೌದಾದಲ್ಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಆ) ಆಗುಂಬೆ ಘಾಟ್ ಸುರಂಗ ಮಾರ್ಗ ನಿರ್ಮಾಣದ ಸಮೀಕ್ಷಾ ವರದಿ ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ ಸಂಪೂರ್ಣ ವರದಿ ಹಾಗೂ ಸಮೀಕ್ಷೆಗೆ ಖರ್ಚಾದ ಅನುದಾನದ ಮೊತ್ತವೆಷ್ಟು ಮತ್ತು ಸಂಸ್ಥೆಯ; (ವಿವರ ನೀಡುವುದು)

(ಇ) ಆಗುಂಬೆ ಘಾಟ್ ಸುರಂಗ ಮಾರ್ಗ ನಿರ್ಮಾಣದಿಂದ ರಾಜ್ಯದ ರಾಜಧಾನಿ ಮತ್ತು ಕರಾವಳಿ ಜಿಲ್ಲೆಗಳ ನಡುವಿನ ಪ್ರಯಾಣದ ಅವಧಿ ಕಡಿಮೆಯಾಗುವುದರೊಂದಿಗೆ ಪ್ರವಾಸೋದ್ಯಮ ಮತ್ತು ವಾಣಿಜ್ಯ ಅಭಿವೃದ್ಧಿ ಪೂರಕವಾಗುವ ಅಂಶ ಸರ್ಕಾರದ ಗಮನಕ್ಕಿದೆಯೇ;

(ಈ) ಆಗುಂಬೆ ಘಾಟ್ ಸುರಂಗ ಮಾರ್ಗ ನಿರ್ಮಾಣದ ಯೋಜನೆಯನ್ನು ಸರ್ಕಾರ ಯಾವಾಗ ಕೈಗೆತ್ತಿಕೊಳ್ಳಲಿದೆ?

## ಎಸ್.ಸಿ.ಪಿ /ಟಿ.ಎಸ್.ಪಿ. ಅಡಿಯಲ್ಲಿ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದರು):–**

೧೨ (೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಕೋಲಾರ ಜಿಲ್ಲೆಗೆ ತೋಟಗಾರಿಕೆ ಇಲಾಖೆಯಿಂದ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಬಿಡುಗಡೆಯಾದ ಹಣ ಎಷ್ಟು; ಖರ್ಚು ಮಾಡಲಾದ ಹಣ ಎಷ್ಟು;

(ಆ) ಯಾವ ಯಾವ ಕಾಮಗಾರಿಗಳಿಗೆ ಹಣ ನೀಡಲಾಗಿದೆ; ಫಲಾನುಭವಿಗಳ ವಿವರ, ನೀಡಿದ ಮೊತ್ತ ಮತ್ತು ಉದ್ದೇಶದ ವಿವರ ನೀಡುವುದು?

## ಎಸ್.ಸಿ.ಪಿ /ಟಿ.ಎಸ್.ಪಿ. ಅಡಿಯಲ್ಲಿ ಬಿಡುಗಡೆಯಾದ ಅನುದಾನದ ವಿವರ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದರು):–**

೧೩ (೩೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಕೋಲಾರ ಜಿಲ್ಲೆಗೆ ಕೃಷಿ ಇಲಾಖೆಯಿಂದ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಬಿಡುಗಡೆಯಾದ ಹಣ ಎಷ್ಟು; ಆ ಪೈಕಿ ಖರ್ಚು ಮಾಡಲಾದ ಹಣ ಎಷ್ಟು;

(ಆ) ಯಾವ ಯಾವ ಕಾಮಗಾರಿ ಹಾಗೂ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಮೊತ್ತ ನೀಡಲಾಗಿದೆ; ಫಲಾನುಭವಿಗಳ ವಿವರ, ನೀಡಿದ ಮೊತ್ತ ಮತ್ತು ಉದ್ದೇಶದ ವಿವರ ನೀಡುವುದು?

**ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆ ಜಾರಿಗೊಳಿಸುವ ಕುರಿತು**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದರು) –**

೧೪ (೩೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ನಿಗಧಿಪಡಿಸಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಹಣ ಖರ್ಚಾಗದೆ ಸರ್ಕಾರಕ್ಕೆ ವಾಪಸ್ಸು ಮಾಡಿರುವುದೆಷ್ಟು;

(ಆ) ಹಾಗಿದ್ದಲ್ಲಿ, ಖರ್ಚಾಗದೆ ಸರ್ಕಾರಕ್ಕೆ ವಾಪಸ್ಸು ಮಾಡಿರುವ ಹಣವನ್ನು ಮಾರ್ಚ್ ೨೦೧೬ರ ಒಳಗೆ ಖರ್ಚು ಮಾಡಲಾಗುವುದೇ;

(ಇ) ಖರ್ಚು ಮಾಡಲಾಗದೆ ಉಳಿದಿರುವ ಹಣವನ್ನು ಮುಂದಿನ ವರ್ಷಕ್ಕೆ ಬಳಕೆ ಮಾಡಲಾಗುವುದೇ?

**ಹಾಲು ಉತ್ಪಾದಕರಿಗೆ ಸಹಾಯಧನ ಬಿಡುಗಡೆ ಕುರಿತು**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದರು):-**

೧೫ (೩೯) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಲು ಉತ್ಪಾದಕರಿಗೆ ಸರ್ಕಾರ ಲೀಟರ್ ಒಂದಕ್ಕೆ ನೀಡಲಾಗುತ್ತಿರುವ ಸಹಾಯಧನ ಎಷ್ಟು;

(ಆ) ೨೦೧೫-೧೬ನೇ ಸಾಲಿನಲ್ಲಿ ಹಾಲು ಉತ್ಪಾದಕರ ಸಂಘಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು; ಬಾಕಿ ಉಳಿದಿರುವ ಹಣ ಎಷ್ಟು; ಯಾವ ಮಾಹೆಯಿಂದ ಈ ಧನಸಹಾಯವನ್ನು ಬಿಡುಗಡೆ ಮಾಡಲಾಗಿದೆ;

(ಇ) ಕಾಲಕಾಲಕ್ಕೆ ಬಿಡುಗಡೆ ಮಾಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು?

**ಹನಿ ನೀರಾವರಿ ಯೋಜನೆ ಬಗ್ಗೆ**

ಶ್ರೀ ಡಿ.ಎಸ್. ವೀರಯ್ಯ (**ವಿಧಾನಸಭೆಯಿಂದ ಚುನಾಯಿತರಾದರು**):-

೧೬ (೪೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಿಂದ ಕೋಲಾರ ಜಿಲ್ಲೆಯಲ್ಲಿ ಹನಿ ನೀರಾವರಿ ಯೋಜನೆಯನ್ನು ಅಳವಡಿಸಿರುವ ರೈತರ ಸಂಖ್ಯೆ ಎಷ್ಟು;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಅವರಿಗೆ ನಿಗದಿಪಡಿಸಿರುವ ಸಹಾಯಧನದ ಮೊತ್ತ ಎಷ್ಟು; (ಸರ್ಕಾರಿ ಆದೇಶದ ಪ್ರತಿಯನ್ನು ಒದಗಿಸುವುದು) ಹಾಗೂ ಈ ಸೌಲಭ್ಯ ಪಡೆಯಲು ಅನುಸರಿಸಬೇಕಾದ ಮಾನದಂಡಗಳೇನು;

(ಇ) ಎಷ್ಟು ಮಂದಿ ರೈತರಿಗೆ ಸಹಾಯಧನದ ಹಣ ನೀಡಲಾಗಿದೆ; ಬಾಕಿ ಇರುವ ರೈತರ ಸಂಖ್ಯೆ ಎಷ್ಟು; ನೀಡಬೇಕಾಗಿರುವ ಸಹಾಯಧನದ ಮೊತ್ತ ಎಷ್ಟು; ವಿಳಂಬಕ್ಕೆ ಕಾರಣಗಳೇನು?

## ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದರು):-**

೧೭ (೪೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ವಿದ್ಯಾಪೀಠ ಬಡಾವಣೆಯ ೧೭ ಗುಂಟೆ ಜಮೀನನ್ನು ಭೂ ಮಾಲೀಕರೊಡನೆ ಶಾಮೀಲಾಗಿ ದಾವಾ ಸಂಖ್ಯೆ 8832/2004 ನ್ನು ನ್ಯಾಯಾಲಯದಲ್ಲಿ ಕೈ ಬಿಟ್ಟು ಉದ್ದೇಶಪೂರ್ವಕವಾಗಿ ಅವ್ಯವಹಾರ ಎಸಗಿರುವ ಬಗ್ಗೆ ಈವರೆವಿಗೆ ಇಲಾಖೆಯವರು ತೆಗೆದುಕೊಂಡಿರುವ ಕಾನೂನು ಕ್ರಮಗಳೇನು; (ದೃಢೀಕೃತ ದಾಖಲಾತಿಗಳ ಸಹಿತ ಮಾಹಿತಿ ನೀಡಿ);

(ಆ) ಸಂಘದ ಮಾಜಿ ಅಧ್ಯಕ್ಷರು, ಹಾಲಿ ನಿರ್ದೇಶಕರು (ಶ್ರೀ ಎಂ. ನಾಗರಾಜು) ಸಂಘದ ಮಲ್ಲತ್ತಹಳ್ಳಿ ಐ.ಟಿ.ಐ. ಬಡಾವಣೆಯ ಸರ್ವೆ ನಂ. 21ರಲ್ಲಿ ಬಿಡಿಎ ನೀಲಿ ನಕ್ಷೆಯಂತೆ ಪಾರ್ಕ್‌ಗೆ ಮೀಸಲಾಗಿದ್ದ ಜಾಗಗಳ ಪೈಕಿ 42X75 ಅಳತೆಯ ಪಾರ್ಕ್ ಜಾಗವನ್ನು ಕಬಳಿಸಿ ನೋಂದಾಯಿಸಿಕೊಂಡಿರುವ ಬಗ್ಗೆ ಆಡಳಿತ ಮಂಡಳಿಯವರು ಹಾಗೂ ಇಲಾಖೆಯವರು ಈವರೆವಿಗೂ ತೆಗೆದುಕೊಂಡಿರುವ ಕಾನೂನಿನ ಕ್ರಮಗಳೇನು; (ದೃಢೀಕೃತ ದಾಖಲೆ ಸಹಿತ ಮಾಹಿತಿ ನೀಡಿ)

(ಇ) ಸಂಘದ ಹಾಲಿ ನಿರ್ದೇಶಕರು (ಶ್ರೀಮತಿ ಶಾಂತಮ್ಮ) ಸಂಘಕ್ಕೆ 30X40 ಅಳತೆಯ ನಿವೇಶನಕ್ಕೆ ಅರ್ಜಿ ಸಲ್ಲಿಸಿ ಕಾನೂನು ಬಾಹಿರವಾಗಿ 40X60 ನಿವೇಶನವನ್ನು ನಾಯಂಡಹಳ್ಳಿ ಬಡಾವಣೆಯಲ್ಲಿ ಕಬಳಿಸಿ ಅವ್ಯವಹಾರ ಎಸಗಿರುವ ಬಗ್ಗೆ ಇಲಾಖೆಯವರು ಈವರೆವಿಗೂ ತೆಗೆದುಕೊಂಡಿರುವ ಕಾನೂನಿನ ಕ್ರಮಗಳೇನು? (ದೃಢೀಕೃತ ದಾಖಲೆ ಸಹಿತ ಮಾಹಿತಿ ನೀಡಿ)

## ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ಕಾನೂನು ಬಾಹಿರವಾಗಿ ಕರಾರನ್ನು ಮಾಡಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದರು):-**

೧೮ (೪೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ 40X60 ಅನುಪಾತದ ಕಾನೂನು ಬಾಹಿರ ಕರಾರುಗಳನ್ನು ಗುತ್ತಿಗೆದಾರರೊಡನೆ ಮಾಡಿಕೊಂಡು ಸಂಘದ ಬಡಾವಣೆಯ ನಿವೇಶನಗಳನ್ನು ಖಾಸಗಿಯವರಿಗೆ ಪರಭಾರೆ ಮಾಡಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ನಡೆಸಿರುವ ಬಗ್ಗೆ ಇಲಾಖೆಯವರು ಈವರೆವಿಗೂ ತೆಗೆದುಕೊಂಡಿರುವ ಕಾನೂನಿನ ಕ್ರಮಗಳೇನು; (ದೃಢೀಕೃತ ದಾಖಲೆ ಸಹಿತ ಮಾಹಿತಿ ನೀಡುವುದು)

(ಆ) ಸಂಘದ ಆಡಳಿತ ಮಂಡಳಿಯ ನಿರ್ದೇಶಕರ ಸಂಖ್ಯೆಯನ್ನು 9ಕ್ಕೆ ಮುಂದುವರೆಸುವುದೆಂದು ಸರ್ವ ಸದಸ್ಯರ ಸಭೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ತೀರ್ಮಾನಿಸಿದ್ದರೂ ಬೈಲಾ ಉಪ ನಿಯಮಗಳನ್ನೇ ತಿದ್ದಿ ಫೋರ್ಜರಿ ಮಾಡಿರುವವರ ವಿರುದ್ಧ

ಹಾಗೂ ಸಂಘದ ಕಾರ್ಯದರ್ಶಿ (ಶ್ರೀಮತಿ ವಿ. ಶಾಮಲ)ಯವರ ವಿರುದ್ಧ ಇಲಾಖೆಯವರು ಈವರೆವಿಗೂ ಏಕೆ ಕ್ರಿಮಿನಲ್ ದಾವಾ ದಾಖಲಿಸಿ ಕಾನೂನು ಕ್ರಮ ಕೈಗೊಂಡಿಲ್ಲ ಹಾಗೂ ನಿರ್ದೇಶಕರುಗಳ ಸಂಘದ ಸದಸ್ಯತ್ವವನ್ನು ಏಕೆ ರದ್ದುಗೊಳಿಸಿಲ್ಲ? (ದೃಢೀಕೃತ ದಾಖಲೆ ಸಹಿತ ಮಾಹಿತಿ ನೀಡುವುದು)

## ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಕೋಟ್ಯಾಂತರ ರೂಪಾಯಿ ಅವ್ಯವಹಾರದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದರು):-**

೧೯ (೪೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಂಘದಲ್ಲಿ ನಡೆದಿರುವ ಐ.ಟಿ.ಐ. ಮಲ್ಲತ್ತಹಳ್ಳಿ ಬಡಾವಣೆಯ ಸರ್ವೆ ನಂ.10/11ರಲ್ಲಿ ಸಿ.ಎ. ಮತ್ತು ಪಾರ್ಕ್ ಜಾಗವನ್ನು ನಿವೇಶನವನ್ನಾಗಿ ವಿಂಗಡಿಸಿ ಕಾನೂನು ಬಾಹಿರವಾಗಿ ನೋಂದಣಿ ಮಾಡಿ ಸಂಘದಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ನಡೆದಿರುವ ಬಗ್ಗೆ ಇಲಾಖೆಯವರು ಈವರೆಗೆ ತೆಗೆದುಕೊಂಡಿರುವ ಕಾನೂನಿನ ಕ್ರಮಗಳೇನು; (ದಿನಾಂಕ: ೦೧-೦೪-೨೦೧೪ ರಿಂದ ಇಲ್ಲಿಯವರೆಗೆ ನಡೆದಿರುವ ಎಲ್ಲಾ ಆಡಳಿತ ಮಂಡಳಿಗಳ ತೀರ್ಮಾನಗಳ ಪ್ರತಿ ಹಾಗೂ ನೋಂದಣಿಯಿತ ಕ್ರಯ ಪತ್ರಗಳ ದೃಢೀಕೃತ ದಾಖಲಾತಿಗಳ ಸಹಿತ ಮಾಹಿತಿ ನೀಡುವುದು)

(ಆ) ಸಂಘದ ನಗರೂರು ಬಡಾವಣೆ ಅಭಿವೃದ್ಧಿ ಸಂಬಂಧ ಕಾರ್ಯದರ್ಶಿ ಹಾಗೂ ಆಡಳಿತ ಮಂಡಳಿಯವರು ನಡೆಸಿರುವ ಸಂಘದ ಹಾಗೂ ಸದಸ್ಯರ ಸುಮಾರು ೨೮ ಕೋಟಿ ಹಣದ

ದುರುಪಯೋಗ ಹಾಗೂ ಅವ್ಯವಹಾರಗಳ ಸಂಬಂಧ ಇಲಾಖೆಯವರು ಈವರೆಗೆ ತೆಗೆದುಕೊಂಡಿರುವ ಕಾನೂನಿನ ಕ್ರಮಗಳೇನು; (ಗುತ್ತಿಗೆದಾರರಿಗೆ ನೀಡಿರುವ ಹಣದ ಮಾಹಿತಿ, ಭದ್ರತೆ, ಆಡಳಿತ ಮಂಡಳಿಯ ತೀರ್ಮಾನ ಹಾಗೂ ಕರಾರಿನ ಪ್ರತಿ ಸಹಿತ ಮಾಹಿತಿ ನೀಡಿ)

(ಈ) ಸಂಘದ ಹಾಲಿ ಅಧ್ಯಕ್ಷರೆ ಕಾನೂನನ್ನು ಉಲ್ಲಂಘಿಸಿ ಸಂಘದ ಎಳ್ಳುಕುಂಟೆ (H.S.R) ಬಡಾವಣೆಯಲ್ಲಿ ನಿ.ಸಂ. 419ನ್ನು ನೋಂದಾಯಿಸಿ ಕೊಂಡಿರುವ ಬಗ್ಗೆ ಇಲಾಖೆಯವರು ಇವರ ವಿರುದ್ಧ ಕಾನೂನಿನ ಕ್ರಮ ಕೈಗೊಂಡು ಸಂಘದ ಸದಸ್ಯತ್ವ ರದ್ದುಗೊಳಿಸಿಲ್ಲದಿರಲು ಕಾರಣವೇನು:? (ದಾಖಲೆ ಸಹಿತ ಮಾಹಿತಿ ನೀಡುವುದು)

## ಮೂಡಿಗೆರೆ ಪಟ್ಟಣ ಪಂಚಾಯಿತಿ ವತಿಯಿಂದ ನಿರ್ಮಿಸಲಾಗಿರುವ ಅಂಗಡಿ ಮಳಿಗೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದರು):-**

೨೦ (೪೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೂಡಿಗೆರೆ ಪಟ್ಟಣ ಪಂಚಾಯಿತಿ ವತಿಯಿಂದ ನಿರ್ಮಿಸಲಾಗಿರುವ ಅಂಗಡಿ ಮಳಿಗೆಗಳೆಷ್ಟು;

(ಆ) ಈ ಅಂಗಡಿ ಮಳಿಗೆಗಳನ್ನು ಬಾಡಿಗೆದಾರರಿಗೆ ಹಂಚಿಕೆ ಮಾಡುವಾಗ ಯಾವ ಕ್ರಮ ಅನುಸರಿಸಲಾಗಿದೆ; SC, ST, ಯವರಿಗೆ ಎಷ್ಟು ಮಳಿಗೆ ನೀಡಲಾಗಿದೆ;

(ಇ) ಈ ಅಂಗಡಿ ಮಳಿಗೆಗಳಿಂದ ಪಟ್ಟಣ ಪಂಚಾಯಿತಿಗೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು;

(ಈ) ಈ ಅಂಗಡಿ ಮಳಿಗೆಗಳನ್ನು ಪಡೆದ ಪರವಾನಗಿದಾರರು ಸರಿಯಾಗಿ ಬಳಕೆ ಮಾಡುತ್ತಿದ್ದಾರೆಯೇ?

## ಕೃಷಿ ಇಲಾಖೆಯಿಂದ ಅನುಷ್ಠಾನಗೊಂಡ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದರು):–**

೨೧ (೧೧೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷಕ್ಕೆ ಕೃಷಿ ಇಲಾಖೆಯಿಂದ ಅನುಷ್ಠಾನಗೊಂಡ ಕಾರ್ಯಕ್ರಮಗಳಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಸರ್ಕಾರವು ನಿಗದಿಪಡಿಸಿದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ವರ್ಷ ಅನುಷ್ಠಾನಗೊಂಡ ಕಾರ್ಯಕ್ರಮಗಳಾವುವು; ಅವುಗಳಿಗೆ ಬಿಡುಗಡೆಯಾದ ಮೊತ್ತವೆಷ್ಟು; ಅನುಷ್ಠಾನಗೊಂಡ ಕಾರ್ಯಕ್ರಮಗಳನ್ನು ಸರಿಯಾಗಿ ಪೂರ್ಣಗೊಳಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)

## ಹಾವೇರಿ ಮತ್ತು ಧಾರವಾಡದಲ್ಲಿ ಇರುವ ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದರು):–**

೨೨ (೧೨೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಇರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು; ಅವು ಯಾವುವು ಸದರಿ ಕೃಷಿ ಮಾರುಕಟ್ಟೆಗಳನ್ನು ಎಲ್ಲೆಲ್ಲಿ ನಿರ್ಮಿಸಲಾಗಿದೆ; (ವಿವರ ನೀಡುವುದು)

(ಆ) ಅತಿ ಹೆಚ್ಚು ಆದಾಯ ತರುತ್ತಿರುವ ಮಾರುಕಟ್ಟೆಗಳಾವುವು, ಯಾವುದೇ ವಹಿವಾಟು ನಡೆಯದಿರುವ ಮಾರುಕಟ್ಟೆಗಳು ಇವೆಯೇ ಇದ್ದಲ್ಲಿ ಅವು ಯಾವುವು; (ವಿವರ ನೀಡುವುದು)

(ಇ) ಅತೀ ಹೆಚ್ಚು ವಹಿವಾಟು ಮಾಡುತ್ತಿರುವ ಕೃಷಿ ಮಾರುಕಟ್ಟೆಗಳಲ್ಲಿ ರೈತರಿಗೆ ತುಂಬಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪ್ರತಿಯೊಂದು ಮಾರುಕಟ್ಟೆ ಆವರಣದಲ್ಲಿ ರೈತರಿಗೆ ಒದಗಿಸಲಾಗಿರುವ ಮೂಲಭೂತ ಸೌಲಭ್ಯಗಳಾವುವು? (ಸಂಪೂರ್ಣ ವಿವರ ನೀಡುವುದು)

## ಕೃಷಿ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದರು):–**

೨೩ (೧೨೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ೨೦೦೫–೦೬ನೇ ಸಾಲಿನ ಆಯವ್ಯಯದಲ್ಲಿ ಹಾವೇರಿ ಜಿಲ್ಲೆಯ ಕೃಷಿ ಅಭಿವೃದ್ಧಿ ಕಾಮಗಾರಿಗಳಿಗೆ ಮೀಸಲಿರಿಸಿದ ಅನುದಾನ ಎಷ್ಟು;

(ಆ) ಹೀಗೆ ಮೀಸಲಿರಿಸಿದ ಅನುದಾನದಲ್ಲಿ ಯೋಜನೆವಾರು ಅನುಷ್ಠಾನಗೊಂಡ ಕಾರ್ಯಕ್ರಮಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೃಷಿಯ ಅಭಿವೃದ್ಧಿಗಾಗಿ ಯಾವ ನೂತನ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲಾಗಿದೆ ಅಳವಡಿಸಿಕೊಂಡಿದ್ದಲ್ಲಿ ನೂತನ ತಂತ್ರಜ್ಞಾನ ಮಾಹಿತಿಯನ್ನು ನೀಡುವುದು?

## ಶಿಗ್ಗಾಂವಿ ತಾಲ್ಲೂಕಿನ ಬಂಕಾಪುರ ಮಾರ್ಗದ ಕಾರವಾರ, ಇಳಕಲ್ ರಸ್ತೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದರು):-**

೨೪ (೧೦೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿಗ್ಗಾಂವಿ ತಾಲ್ಲೂಕಿನ ಬಂಕಾಪುರ ಮಾರ್ಗದ ಕಾರವಾರ-ಇಳಕಲ್ ರಾಜ್ಯ ಹೆದ್ದಾರಿ-6 ರಲ್ಲಿ ರಸ್ತೆ ಕಾಮಗಾರಿ ಅರ್ಧಕ್ಕೆ ನಿಂತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಒಂದು ವರ್ಷದಿಂದ ಕಾಮಗಾರಿಯನ್ನು ಪೂರ್ಣಗೊಳಿಸದೆ ಇರಲು ಕಾರಣಗಳೇನು; ಹದಗೆಟ್ಟ ರಸ್ತೆಗಳಿಂದಾಗಿ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರಸ್ತೆಗಳ ಅಕ್ಕ ಪಕ್ಕದಲ್ಲಿನ ನಿವಾಸಿಗಳು ಧೂಳಿನಿಂದ ಅನಾರೋಗ್ಯ ಪೀಡಿತರಾಗಿದ್ದು, ಸದರಿ ರಸ್ತೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು;

(ಇ) ಸದರಿ ರಸ್ತೆಯ ಕಾಮಗಾರಿಯನ್ನು ಅತಿ ಶೀಘ್ರ ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಈ ರಸ್ತೆ ಕಾಮಗಾರಿಯನ್ನು ಯಾರಿಗೆ ಗುತ್ತಿಗೆ ನೀಡಲಾಗಿದೆ; ಇದಕ್ಕೆ ಮೀಸಲಿಟ್ಟ ಹಣವೆಷ್ಟು; ಇದಕ್ಕೆ ನಿಗದಿಪಡಿಸಲಾಗಿರುವ ಕಾಲಮಿತಿ ಎಷ್ಟು?

## ತಂತಿ ಬದಲಾಯಿಸಿ ಕೇಬಲಿಂಗ್ ಮಾಡುವ ವಿಚಾರ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದರು):-**

೨೫ (೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಯಲಹಂಕ ಉಪನಗರದ ೨ನೇ ಹಂತದ ೨ನೇ ಕ್ರಾಸಿನ ರಸ್ತೆಗೆ ಅಳವಡಿಸಲಾದ ಬೀದಿ ದೀಪದ ಕಂಬಗಳ ವಿದ್ಯುತ್ ತಂತಿಗಳು ಈ ರಸ್ತೆಯಲ್ಲಿರುವ ಮನೆಗಳ ಗ್ಯಾಲರಿಗೆ ಅತ್ಯಂತ ಹತ್ತಿರವಿದ್ದು ಮಕ್ಕಳು ಯಾವುದೇ ಸಂದರ್ಭದಲ್ಲಿ ಸದರಿ ತಂತಿಗಳು ಮುಟ್ಟುವ ಸಂಭವ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿ ಯಾವುದೇ ಅಪಾಯ ಅವಘಡ ಸಂಭವಿಸುವ ಪೂರ್ವದಲ್ಲಿ ಯಾರೂ ದೂರು ನೀಡಿಲ್ಲ, ಅರ್ಜಿ ಬಂದಿಲ್ಲ ಎಂಬ ಕುಂಟು ನೆಪ ನೀಡದೆ ಸದರಿ ರಸ್ತೆಯ ತಂತಿಗಳನ್ನು ಬದಲಾಯಿಸಿ ಸದರಿ ಸ್ಥಳದಲ್ಲಿ ಕೇಬಲಿಂಗ್ ಮಾಡಿಕೊಡಲು ಸರ್ಕಾರ ಗಮನಹರಿಸುವುದೇ?

## ಕಳೆದ ೦೩ ವರ್ಷದಲ್ಲಿ ರಾಜ್ಯದಲ್ಲಿ ತೋಟಗಾರಿಕೆ ಇಲಾಖೆ ಕ್ಷೇತ್ರದ ಉತ್ಪಾದನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೨೬ (೮೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೩ ವರ್ಷದಲ್ಲಿ ರಾಜ್ಯದಲ್ಲಿ ತೋಟಗಾರಿಕೆ ಇಲಾಖೆ ಕ್ಷೇತ್ರದ ಉತ್ಪಾದನೆ ಎಷ್ಟು; (ವಿವರ ನೀಡುವುದು)

(ಆ) ತೋಟಗಾರಿಕೆ ಕ್ಷೇತ್ರದಿಂದ ಯುವಕರು ವಿಮುಖರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ತೋಟಗಾರಿಕೆ ಕ್ಷೇತ್ರದತ್ತ ಯುವಕರು ಆಸಕ್ತಿ ಬೆಳಸಲು ಹಾಗೂ ಯುವಕರ ತೊಡಗಿಸುವಿಕೆಗೆ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು?

## ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಕೊಡಮಾಡಲಾಗುತ್ತಿರುವ ಯೋಜನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೨೭ (೯೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಕೊಡಮಾಡಲಾಗುತ್ತಿರುವ ಯೋಜನೆಗಳು ಯಾವುವು;

(ಆ) ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಈ ಮೂರು ಜಿಲ್ಲೆಗಳಲ್ಲಿ ಯಾವ ಯಾವ ರೈತರಿಗೆ ಯಾವ ಯಾವ ಯೋಜನೆಯಡಿ ಫಲಾನುಭವಿಯಾಗಿ ಗುರುತಿಸಲಾಗಿದೆ; ಅವರಿಗೆ ಕೊಡಮಾಡಲಾಗಿರುವ ಸೌಲಭ್ಯದ ಮೊತ್ತ ಏನು; ಪ್ರತಿ ರೈತರಿಗೆ ನೀಡಿರುವ ಹಣಕಾಸಿನ ಮೊತ್ತವೆಷ್ಟು; (ಸೌಲಭ್ಯದ ವಿವರ ನೀಡುವುದು)

(ಇ) ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿಯಲ್ಲಿ ಗುರುತಿಸಲಾಗಿರುವ ಫಲಾನುಭವಿಗಳು ಅವರಿಗೆ ನೀಡುತ್ತಿರುವ ಸೌಲಭ್ಯವೇನು; ಹಣಕಾಸಿನ ವಿವರದೊಂದಿಗೆ ಪ್ರತಿಯೊಬ್ಬರ ವಿವರ

ನೀಡುವುದು? (ಫಲಾನುಭವಿವಾರು ಕೇಂದ್ರ ಪ್ರಾಯೋಜಿತ, ರಾಜ್ಯ ಪ್ರಾಯೋಜಿತ ಎರಡರ ಹಣಕಾಸಿನ ವಿವರವನ್ನು ಪ್ರತ್ಯೇಕವಾಗಿ ಒದಗಿಸುವುದು)

## ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಕೊಡಮಾಡಲಾಗುತ್ತಿರುವ ಯೋಜನೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೨೮ (೮೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸದ್ಯ ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಯಾವ ಯಾವ ಯೋಜನೆಗಳ ಮೂಲಕ, ಯಾವ ಯಾವ ಸೌಲಭ್ಯ ನೀಡಲಾಗುತ್ತಿದೆ; ಹಾಗೂ ಇವುಗಳನ್ನು ಒದಗಿಸಲು ಅನುಸರಿಸುತ್ತಿರುವ ಮಾನದಂಡಗಳು ಯಾವುವು;

(ಆ) ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಈ ಮೂರು ಜಿಲ್ಲೆಗಳಲ್ಲಿ ಯಾವ ಯಾವ ರೈತರಿಗೆ ಯಾವ ಯಾವ ಯೋಜನೆಯಡಿ ಫಲಾನುಭವಿಯಾಗಿ ಗುರುತಿಸಲಾಗಿದೆ; ಅವರಿಗೆ ಕೊಡಮಾಡಲಾಗಿರುವ ಸೌಲಭ್ಯದ ಮೊತ್ತ ಏನು; ಪ್ರತಿ ರೈತರಿಗೆ ನೀಡಿರುವ ಹಣಕಾಸಿನ ಸೌಲಭ್ಯವೇನು; (ವಿವರ ನೀಡುವುದು)

(ಇ) ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ಗುರುತಿಸಲಾಗಿರುವ ಫಲಾನುಭವಿಗಳು ಅವರಿಗೆ ನೀಡುತ್ತಿರುವ ಸೌಲಭ್ಯ/ಹಣಕಾಸಿನ ಮೊತ್ತವೆಷ್ಟು? (ಫಲಾನುಭವಿವಾರು ಕೇಂದ್ರ ಪ್ರಾಯೋಜಿತ, ರಾಜ್ಯ ಪ್ರಾಯೋಜಿತ ಎರಡರ ಪ್ರತ್ಯೇಕ ವಿವರ ನೀಡುವುದು)

## ತಾವರೆಕೆರೆಯಿಂದ ನೆಲಮಂಗಲ ಸೇರುವ ರಸ್ತೆಯ ಅಗಲೀಕರಣದ ಬಗ್ಗೆ

**ಶ್ರೀ ಅಶ್ವಥನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):-**

೨೯(೯೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತಾವರೆಕೆರೆಯಿಂದ ನೆಲಮಂಗಲಕ್ಕೆ ಸೇರುವ ಗುಂಡೆಕೊಪ್ಪ ರಸ್ತೆಯ ವಿಸ್ತೀರ್ಣ ಎಷ್ಟು; ಹಾಲಿ ರಸ್ತೆಯನ್ನು ಅಗಲೀಕರಣ ಮಾಡುವುದರಿಂದ ಮಾಗಡಿ ರಸ್ತೆ, ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ವಾಹನ ಒತ್ತಡ ಕಡಿಮೆಯಾಗುವುದರಿಂದ ರಸ್ತೆಯನ್ನು ಅಗಲೀಕರಣ ಮಾಡಬಹುದಲ್ಲವೇ;

(ಆ) ಹಾಗಿದ್ದಲ್ಲಿ, ಮಾಗಡಿ ರಸ್ತೆ, ಸುಂಕದಕಟ್ಟೆಯಿಂದ ಎಲ್ಲಿಯವರಿಗೆ ಅಗಲೀಕರಣ ಕಾಮಗಾರಿ ನಿರ್ವಹಿಸಲಾಗುವುದು; ನಿರ್ಧರಿಸಿದ್ದೇ ಆದರೆ ತಾವರೆಕೆರೆಯವರೆವಿಗೂ ವಿಸ್ತರಿಸಲಾಗುವುದೇ? (ಮಾಹಿತಿ ಒದಗಿಸುವುದು)

## MSDP ಯೋಜನೆ ಬಗ್ಗೆ

**ಶ್ರೀ ಅಶ್ವಥನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):-**

೩೦ (೯೪) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫-೧೬ನೇ ಸಾಲಿನಲ್ಲಿ MSDP ಯೋಜನೆಯಡಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಲಾಗಿರುವ ಎಷ್ಟು ಸ್ಥಳಗಳಲ್ಲಿ ವಿದ್ಯಾರ್ಥಿನಿಲಯಗಳು/ವಸತಿ ಶಾಲೆ/ವಸತಿ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ; ಇದರ ಪ್ರಯೋಜನೆ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಸದರಿ MSDP ಯೋಜನೆಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡುವ ಹಣವೆಷ್ಟು?

## ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೃಷಿ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ್ (ಪದವೀಧರರ ಕ್ಷೇತ್ರ):-**

೩೧ (೯೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಪ್ರತಿ ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಬೋಧಕ, ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಸದ್ಯ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರತಿ ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ (ವಿಶ್ವವಿದ್ಯಾಲಯವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿಯ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ, ಬೋಧಕೇತರ ಹುದ್ದೆಗಳ ಸಂಖ್ಯೆ ಎಷು; ಆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೈಗೊಂಡ ಕ್ರಮಗಳೇನು?

## KPCL ದಲ್ಲಿ ಖಾಲಿ ಇರುವ ತಾಂತ್ರಿಕ, ತಾಂತ್ರಿಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ್ (ಪದವೀಧರರ ಕ್ಷೇತ್ರ):-**

೩೨ (೯೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತ KPCL ದಲ್ಲಿ ಮಂಜೂರಾದ ತಾಂತ್ರಿಕ, ತಾಂತ್ರಿಕೇತರ ಹುದ್ದೆಗಳೆಷ್ಟು; (ಘಟಕವಾರು ವಿವರ ನೀಡುವುದು)

(ಆ) KPCL ನ ವಿವಿಧ ಉತ್ಪಾದನಾ ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಂತ್ರಿಕ ಹಾಗೂ ತಾಂತ್ರಿಕೇತರ ಸಿಬ್ಬಂದಿಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಖಾಲಿ ಇರುವ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ?

## ಗದಗ-ಬೆಟಗೇರಿ ಅವಳಿ ನಗರಕ್ಕೆ ಕೇಂದ್ರ ಸರ್ಕಾರದ "ಅಮೃತ ಯೋಜನೆ"

**ಶ್ರೀ ಎಸ್.ವ್ಹಿ. ಸಂಕನೂರ್ (ಪದವೀಧರರ ಕ್ಷೇತ್ರ):-**

೩೩ (೧೨೮) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗದಗ-ಬೆಟಗೇರಿ ಅವಳಿ ನಗರಕ್ಕೆ ಕೇಂದ್ರ ಸರ್ಕಾರದ ಅಮೃತ ಯೋಜನೆಯಡಿ ನಗರ ಹಸರೀಕರಣ ಮಂಜೂರಾಗಿದೆಯೇ; ಇದಕ್ಕೆ ಮಂಜೂರಾದ ಮತ್ತು ಬಿಡುಗಡೆಯಾದ ಅನುದಾನವೆಷ್ಟು;

(ಆ) ಇದಕ್ಕೆ ಬಿಡುಗಡೆಯಾದ ಅನುದಾನವನ್ನು ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯನ್ನು ಹೊರತುಪಡಿಸಿ ಹೊರವಲಯದಲ್ಲಿ ಉಪಯೋಗಿಸಲು ಅವಕಾಶವಿದೆಯೇ?

## ಎ.ಡಿ.ಬಿ. ಯೋಜನೆ ಅಡಿ ಗದಗ–ಬೆಟಗೇರಿ ಅವಳಿ ನಗರದ ೨ನೇ ಹಂತದ ೨೪x೭ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ್ (ಪದವೀಧರರ ಕ್ಷೇತ್ರ):–**

೩.೪ (೧೨೯) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:--

(ಅ) ಎ.ಡಿ.ಬಿ. ಯೋಜನೆ ಅಡಿ ಗದಗ–ಬೆಟಗೇರಿ ಅವಳಿ ನಗರಕ್ಕೆ ೨ನೇ ಹಂತದ ೨೪x೭ ಕುಡಿಯುವ ನೀರಿನ ಯೋಜನೆ ೨೩–೦೬–೨೦೧೭ ರಂದು ಕಾಮಗಾರಿ ಮುಕ್ತಾಯವಾಗಬೇಕಾಗಿದ್ದು, ಸದ್ಯ ಈ ಕಾಮಗಾರಿಯ ಪ್ರಗತಿ ಎಷ್ಟು ಪ್ರಮಾಣದಲ್ಲಿ ಆಗಿದೆ;

(ಆ) ಗದಗ–ಬೆಟಗೇರಿ ಜನರಿಗೆ ಕುಡಿಯುವ ನೀರಿನ ಸರಬರಾಜು ೨೦–೨೫ ದಿನಗಳಿಗೊಮ್ಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸುಧಾರಣೆಗಾಗಿ ಕೈಗೊಂಡ ಕ್ರಮಗಳೇನು;

(ಇ) ಸರ್ವೆಸಾಮಾನ್ಯವಾಗಿ ಪ್ರತಿ ತಿಂಗಳಿಗೊಮ್ಮೆ ನೀರು ಸರಬರಾಜು ಮಾಡುವ ಪೈಪ್ ಒಡೆದು ನೀರು ಸರಬರಾಜಿನಲ್ಲಿ ಮತ್ತಷ್ಟು ವಿಳಂಬವಾಗಿ ತಿಂಗಳಿಗೆ ಒಂದು ಬಾರಿಯೂ ನೀರಿನ ಸರಬರಾಜು ಆಗದೇ ಇರುವುದರಿಂದ, ಗದಗ–ಬೆಟಗೇರಿ ಜನ ನಿರಂತರ ನಗರ ಸಭೆ ವಿರುದ್ಧ ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಹಿಂದೆ ನೀರಿನ ಸರಬರಾಜು ನಿಯಮಿತ ಅವಧಿಯಲ್ಲಿ (ವಾರಕ್ಕೆ ಒಮ್ಮೆಯಾದರು) ಮಾಡಲು ಸಾರ್ವಜನಿಕರು ಹೋರಾಟ ಮಾಡಿದಾಗ ಅವರನ್ನು ಬಂಧಿಸಿ, ಪೊಲೀಸ್ ಕೇಸು ದಾಖಲು ಮಾಡಿದ್ದನ್ನು ಸದನದಲ್ಲಿ ಪ್ರಸ್ತಾಪಿಸಿದಾಗ ಗದಗ ಜಿಲ್ಲೆಯ ಉಸ್ತುವಾರಿ ಸಚಿವರು ದಾಖಲಾದ ಕೇಸುಗಳನ್ನು ವಾಪಸ್ ಪಡೆಯುವುದಾಗಿ ಒಪ್ಪಿಕೊಂಡಿದ್ದು, ಈ ಹಿನ್ನೆಲೆಯಲ್ಲಿ ದಾಖಲಾದ ಪೊಲೀಸ್ ಕೇಸುಗಳನ್ನು ಯಾವಾಗ ವಾಪಸ್ ಪಡೆಯಲಾಗುತ್ತದೆ?

## ಬೀದರ್ ಜಿಲ್ಲೆಯ ವಿದ್ಯುತ್ ಸಂಪರ್ಕ ಹೊಂದಿರದ ಗ್ರಾಮ ಪಂಚಾಯತ್‌ಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫ (೧೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ:–

(ಅ) ಗಡಿಭಾಗದ ಬೀದರ್ ಜಿಲ್ಲೆಯ ಕೆಲವು ಗ್ರಾಮಗಳು ವಿದ್ಯುತ್ ಸಂಪರ್ಕ ಹೊಂದದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೀದರ ಜಿಲ್ಲೆಯಲ್ಲಿ ಎಷ್ಟು ಗ್ರಾಮಗಳು ವಿದ್ಯುತ್ ಸಂಪರ್ಕ ಹೊಂದಿರುವುದಿಲ್ಲ (ವಿವರ ನೀಡುವುದು)

(ಇ) ಈ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ?

## ಬೀದರ್ ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬ (೧೦೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕೆಲವು ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುವುದೇ;

(ಆ) ಕೆಲವು ಪ್ರದೇಶಗಳಿಗೆ ರಸ್ತೆ ಸಂಪರ್ಕಗಳಿಲ್ಲದೆ ಸಾರಿಗೆ ಸೌಲಭ್ಯದಿಂದ ಜನರು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ ರಸ್ತೆಗಳ ಸಂಪರ್ಕವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭ (೧೦೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ರೈತ ಸಂಪರ್ಕ ಕೇಂದ್ರಗಳು ಎಷ್ಟು;

(ಆ) ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಯಾವ ಯಾವ ಸೌಲಭ್ಯಗಳನ್ನು ರೈತ ಸಂಪರ್ಕ ಕೇಂದ್ರಗಳಿಗೆ ಒದಗಿಸಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿನ ವಿದ್ಯುತ್ ಸಮಸ್ಯೆ ಮತ್ತು ಪರಿಹಾರೋಪಾಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮ (೧೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ವಿದ್ಯುತ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಮಸ್ಯೆಯ ಪರಿಹಾರಕ್ಕಾಗಿ ಸರ್ಕಾರ ಅನುಸರಿಸುತ್ತಿರುವ ಮಾರ್ಗೋಪಾಯಗಳೇನು;

(ಆ) ಬೇರೆ ರಾಜ್ಯಗಳಿಂದ ವಿದ್ಯುತ್ ಖರೀದಿಸಲಾಗುತ್ತಿದೆಯೇ; ಖರೀದಿಸುತ್ತಿದ್ದರೆ, ಯಾವ ರಾಜ್ಯದಿಂದ ಮತ್ತು ಖರೀದಿಯ ಪ್ರಮಾಣ ಮತ್ತು ಅದಕ್ಕೆ ತಗಲುವ ವೆಚ್ಚ ಎಷ್ಟು; (ವಿವರ ತಿಳಿಸುವುದು)

(ಇ) ಹಲವಾರು ಜಿಲ್ಲೆಗಳಲ್ಲಿ ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳು ವಿದ್ಯುತ್‌ನ್ನು ಅವಲಂಬಿಸಿದ್ದು, ಸಾಕಷ್ಟು ವಿದ್ಯುತ್ ಪೂರೈಸದಿರಲು ಕಾರಣವೇನು; ರಾಜ್ಯದಲ್ಲಿ ಕೃಷಿ ಚಟುವಟಿಕೆಗೆ ಬಳಕೆಯಾಗುವ ವಿದ್ಯುತ್ ಪ್ರಮಾಣವೆಷ್ಟು; ಗೃಹ ಬಳಕೆಗೆ ಔದ್ಯೋಗಿಕರಣ ಹಾಗೂ ಇತರೆ ಚಟುವಟಿಕೆಗಳಿಗೆ ಬಳಕೆಯಾಗುತ್ತಿರುವ ಪ್ರಮಾಣವೆಷ್ಟು;

(ಈ) ಗ್ರಾಮೀಣ ಪ್ರದೇಶಗಳಲ್ಲಿ ಒಂದು ದಿನಕ್ಕೆ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಬಳಕೆಯಾಗುತ್ತಿದೆ ಮತ್ತು ಎಷ್ಟು ಪ್ರಮಾಣದಲ್ಲಿ ಪೂರೈಸಲಾಗುತ್ತಿದೆ; (ಕೊರತೆಯ ಪ್ರಮಾಣದ ವಿವರ ನೀಡುವುದು)

(ಉ) ಕಳೆದ ೩ ವರ್ಷದಿಂದ ಇಲ್ಲಿಯವರೆಗೆ ಎಷ್ಟು ಸಬ್–ಸ್ಟೇಷನ್‌ಗಳನ್ನು ನಿರ್ಮಿಸಲಾಗಿದೆ; ಎಷ್ಟು ಟ್ರಾನ್ಸ್ ಫಾರ್ಮರ್ (ವಿದ್ಯುತ್ ಪರಿವರ್ತಕ) ಗಳನ್ನು ಖರೀದಿಸಲಾಗಿದೆ; ರಾಜ್ಯದಲ್ಲಿರುವ ಒಟ್ಟು ವಿದ್ಯುತ್ ಪರಿವರ್ತಕಗಳೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## SCP/TSP ಯೋಜನೆಯಡಿ ರಸ್ತೆ ಅಭಿವೃದ್ಧಿ ಕಾಮಗಾರಿ ಕುರಿತು

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):-**

೩೯ (೧೦೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫-೧೬ನೇ ಸಾಲಿನಲ್ಲಿ SCP/TSP ಯೋಜನೆಯಡಿ, ರಸ್ತೆ ಅಭಿವೃದ್ಧಿ ಕಾಮಗಾರಿ ಕ್ಷೇತ್ರವಾರು ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ವಿಧಾನಸಭೆ ಕ್ಷೇತ್ರವಾರು ವಿವರ ನೀಡುವುದು)

(ಆ) ಗ್ರಾಮೀಣ ಪ್ರದೇಶದಲ್ಲಿ ವಾಸಮಾಡುವ ವಿಧಾನ ಪರಿಷತ್ತು ಸದಸ್ಯರುಗಳಿಗೆ ೨೦೧೬-೧೭ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಇಲಾಖಾವತಿಯಿಂದ ಅನುದಾನ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ಕೃಷಿ ಉತ್ಪಾದಕಗಳ ಮಾರಾಟಕ್ಕೆ ವೆಬ್‌ಸೈಟ್ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೪೦ (೧೦೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾಮಾಜಿಕ ಜಾಲತಾಣಗಳಲ್ಲಿ ಹಲವು ಖಾಸಗಿ ಕಂಪನಿಗಳು, ತಮ್ಮದೇ ಡಾಟ್.ಕಾಮ್‌ಗಳನ್ನು ನಿರ್ಮಿಸಿ, ಇಂಟರ್ನೆಟ್ ಮೂಲಕ ಮಾರಾಟ ಮಾಡುವ ವಿಷಯದಲ್ಲಿ ಅತ್ಯಂತ ಯಶಸ್ವಿಯಾಗಿರುವ ರೀತ್ಯಾ ರೈತರ ಕೃಷಿ ಪದಾರ್ಥಗಳನ್ನು ತಮ್ಮ ಊರಿನಿಂದಲೇ ಇಂಟರ್ನೆಟ್ ಮೂಲಕ ಪ್ರಚಾರ ಮಾಡಿ ಮಾರಾಟ ಮಾಡಲು

ಒಂದು ಕೃಷಿ ಉತ್ಪಾದಕಗಳ ಮಾರಾಟದ ವೆಬ್‌ಸೈಟ್ ಬಿಡುಗಡೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ;

(ಆ) ಉದ್ದೇಶಿಸಿದ್ದಲ್ಲಿ, ಕೊಳ್ಳುವವರ ಜೊತೆ ನೇರ ಸಂಪರ್ಕ ಸಾಧಿಸುವ ನಿಟ್ಟಿನಲ್ಲಿ ವೆಬ್ ಸೈಟ್ ಬಿಡುಗಡೆ ಮಾಡಲು ಹಾಗೂ ರೈತರು ಹಾಗೂ ವರ್ತಕರು ಅದರ ಪ್ರಯೋಜನವನ್ನು ಪಡೆಯುವಂತೆ ಮಾಡಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು? (ವಿವರ ನೀಡುವುದು)

## ಅಸಮರ್ಪಕ ಮಳೆಯಿಂದ ಬಿತ್ತನೆಯಲ್ಲಿ ಆಗಿರುವ ನಷ್ಟಕ್ಕೆ ಪರಿಹಾರೋಪಾಯ ಕ್ರಮಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೪೧ (೧೦೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಂಗಾರು ಹಾಗೂ ಹಿಂಗಾರು ಮಳೆ ಸಮರ್ಪಕವಾಗಿ ಬಾರದೆ ಇರುವುದರಿಂದ ರೈತಾಪಿ ವರ್ಗ ಕಂಗಾಲಾಗಿರುವುದು ನಿಜವೇ;

(ಆ) ರಾಜ್ಯದಲ್ಲಿ ಪ್ರಸ್ತುತ ರೈತರಿಂದ ಒಟ್ಟು ಎಷ್ಟು ಎಕರೆ ಭುಮಿಯಲ್ಲಿ ಬೀಜ ಬಿತ್ತನೆ ಮಾಡಲಾಗಿದೆ;

(ಇ) ಬಿತ್ತನೆಯಾಗಿದ್ದ ಬೀಜ ತೇವಾಂಶ ಕೊರತೆಯಿಂದ ನಷ್ಟಕ್ಕೀಡಾಗಿರುವುದು ನಿಜವೇ; ಹಾಗಿದ್ದಲ್ಲಿ, ನಷ್ಟದ ಪ್ರಮಾಣ ಎಷ್ಟು;

(ಈ) ರೈತರ ನಷ್ಟ ಪರಿಹಾರಕ್ಕೆ ಮತ್ತು ಅವರಿಗೆ ಸಹಕಾರವನ್ನು ನೀಡಲು ಸರ್ಕಾರ ಯಾವ ರೀತಿ ಪರಿಹಾರೋಪಾಯ ಕ್ರಮಗಳನ್ನು ಕೈಗೊಳ್ಳಲಿದೆ ; ರಾಜ್ಯ ಸರ್ಕಾರವು ಎಷ್ಟು ಮೊತ್ತದ ಪರಿಹಾರ ನೀಡಲು ಮುಂದಾಗಿದೆ?

## ರಾಜ್ಯ ಹೆದ್ದಾರಿ ದುರಸ್ಥಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೯೨ (೧೦೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಚಿತ್ರದುರ್ಗದಿಂದ ಹೊಸಪೇಟೆ ವರೆಗಿನ ರಸ್ತೆಯು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ರಸ್ತೆಯ ದುರಸ್ಥಿ ಕಾಮಗಾರಿಗಾಗಿ ಟೆಂಡರ್ ಪ್ರಕ್ರಿಯೆ ಮುಗಿದಿದ್ದು; ಕಾಮಗಾರಿ ವಿಳಂಬವಾಗುತ್ತಿರುವುದು ನಿಜವೇ;

(ಇ) ನಿಜವಾಗಿದ್ದಲ್ಲಿ, ಕಾಮಗಾರಿಯನ್ನು ಪೂರ್ಣಗೊಳಿಸಲು ನೀಡಿರುವ ಕಾಲಾವಧಿ ಎಷ್ಟು; ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ? (ವಿವರ ನೀಡುವುದು)

## ಲಾಲ್ ಬಾಗ್ ಉದ್ಯಾನವನ ಪ್ರವೇಶ ದರವನ್ನು ಕಡಿಮೆ ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೯೩ (೧೧೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಈ ಹಿಂದೆ ೨೦೧೦-೧೧ರಲ್ಲಿ ವಿವಿಧ ಸಂದರ್ಭಗಳಲ್ಲಿ ಲಾಲ್ ಬಾಗ್ ಉದ್ಯಾನವನ ಪ್ರವೇಶಿಸಲು ನಿಗದಿಪಡಿಸಲಾಗಿದ್ದ ಶುಲ್ಕ ಎಷ್ಟು; (ವಿವರ ನೀಡುವುದು)

(ಆ) ಪ್ರಸ್ತುತ ಶುಲ್ಕವನ್ನು ಎರಡು ಪಟ್ಟು ಹೆಚ್ಚಳ ಮಾಡಿರುವುದು ನಿಜವೇ; (ಶುಲ್ಕದ ವಿವರ ನೀಡುವುದು)

(ಇ) ಸಾರ್ವಜನಿಕರ ಬೇಡಿಕೆಯನುಸಾರ, ಶುಲ್ಕ ಹೆಚ್ಚಳವನ್ನು ಮರುಪರಿಶೀಲಿಸಿ ದರವನ್ನು ಕಡಿಮೆಗೊಳಿಸಲು ಸರ್ಕಾರ ಮುಂದಾಗುವುದೆ ?

## ಹಾಲಿನ ಬೆಲೆ ಹೆಚ್ಚಳ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೪೪ (೧೦೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ಪ್ರತಿ ಲೀಟರ್ ಕೆ.ಎಂ.ಎಫ್. ಹಾಲಿನ ಬೆಲೆಯನ್ನು ೪ ರೂ ಗೆ ಹೆಚ್ಚಿಸಲಾಗಿರುವುದು ನಿಜವೇ; ಹಾಗಿದ್ದಲ್ಲಿ ಯಾವಾಗ ಹೆಚ್ಚಿಸಲಾಯಿತು;

(ಆ) ಗ್ರಾಹಕರಿಗೆ ಹೆಚ್ಚಿಸಿರುವ ೪ ರೂಪಾಯಿಯಲ್ಲಿ ಹಾಲು ಒದಗಿಸುತ್ತಿರುವ ಹೈನುಗಾರರಿಗೆ ಎಷ್ಟು ಹಣ ಪ್ರತಿ ಲೀಟರಿಗೆ ನೀಡಲಾಗುತ್ತಿದೆ; (ವಿವರ ನೀಡುವುದು)

(ಇ) ಬೆಂಗಳೂರು ಹಾಲು ಒಕ್ಕೂಟದಿಂದ ಹೈನುಗಾರರಿಗೆ ಪ್ರತಿ ಲೀಟರಿಗೆ ನೀಡಬೇಕಾದ ಹೆಚ್ಚುವರಿ ಹಣವನ್ನು ಹಾಲಿನ ಬೆಲೆ ಹೆಚ್ಚಳ ಮಾಡಿದ ದಿನದಿಂದ ನೀಡಲಾಗಿಲ್ಲವೆನ್ನುವುದು ನಿಜವೇ? (ವಿವರ ನೀಡುವುದು)

## ಗುಂಡ್ಲುಪೇಟೆ ಪಟ್ಟಣದ ಬಡಾವಣೆಗಳಲ್ಲಿ ಚರಂಡಿ ಮತ್ತು ಕುಡಿಯುವ ನೀರಿನ ವ್ಯವಸ್ಥೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೫ (೧೪೦) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಂಡ್ಲುಪೇಟೆ ಪಟ್ಟಣದ ಆಶ್ವಿನಿ ಬಡಾವಣೆ (ದ.ರಾ. ಬೇಂದ್ರ ನಗರ), ನಾಯಕರ ಬೀದಿ, ಕೋಡಹಳ್ಳಿ ವೃತ್ತ ಹಳೇಸಂತೇಮಾಳದ ಬಡಾವಣೆ ಸೇರಿದಂತೆ ಹಲವಾರು ವಾರ್ಡ್‌ಗಳಲ್ಲಿ ಚರಂಡಿ ಸ್ವಚ್ಛಗೊಳಿಸದೇ, ಗಿಡಗಂಟಿಗಳು ಬೆಳದು, ಕಲುಷಿತ ನೀರು ನಿಂತು ಸೊಳ್ಳೆಗಳ ಉತ್ಪತ್ತಿಯಾಗಿ ಸಾರ್ವಜನಿಕರಿಗೆ ಅದರಲ್ಲೂ ಮುಖ್ಯವಾಗಿ ಮಕ್ಕಳಿಗೆ ಆರೋಗ್ಯದ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಚರಂಡಿಗಳನ್ನು ಸ್ವಚ್ಛಗೊಳಿಸಲು, ಫಾಗಿಂಗ್ ಯಂತ್ರ ಬಳಸಿ ಸೊಳ್ಳೆಗಳ ನಿರ್ಮೂಲನೆ ಮಾಡಲು ಕ್ರಮ ಜರುಗಿಸಲಾಗುವುದೇ;

(ಆ) ಗುಂಡ್ಲುಪೇಟೆ ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ೨೧೨ ನಿರ್ಮಾಣ ಕಾಮಗಾರಿ ಆರಂಭವಾದ ಮೇಲೆ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಕುಡಿಯುವ ನೀರು ಸರಬರಾಜು ಮಾಡುವ ಪೈಪ್‌ಲೈನ್‌ಗಳು ಒಡೆದುಹೋಗಿ ಭಾರಿ ಪ್ರಮಾಣದಲ್ಲಿ ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹೆದ್ದಾರಿ ಪ್ರಾಧಿಕಾರದಿಂದ ಗುಂಡ್ಲುಪೇಟೆ ಪುರಸಭೆಗೆ ಈ ಬಾಬ್ತು ಬರಬೇಕಾಗಿರುವ ಹಣ ಎಷ್ಟು; ಕೂಡಲೇ ಈ ಹಣ

ಬಿಡುಗಡೆ ಮಾಡಿಸಿಕೊಂಡು ಪೈಪ್‌ಲೈನ್ ದುರಸ್ತಿಗೆ ಕ್ರಮ ಜರುಗಿಸಲಾಗುವುದೇ?

## ಚಾಮರಾಜನಗರದಲ್ಲಿ ಒಳಚರಂಡಿ ಕಾಮಗಾರಿಯಲ್ಲಿ ತೀವ್ರ ವಿಳಂಬವಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೬ (೧೧೧) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ:-

(ಅ) ಚಾಮರಾಜನಗರದಲ್ಲಿ ಒಳಚರಂಡಿ ಕಾಮಗಾರಿಗಳು ಆರಂಭವಾಗಿದ್ದು, ಯಾವಾಗ, ಈ ಕಾಮಗಾರಿಗಳು ಪೂರ್ಣಗೊಳ್ಳುವುದು ಯಾವಾಗ, ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; ಬಾಕಿ ಇರುವ ಕಾಮಗಾರಿಗಳು ಯಾವುವು; ಇದುವರೆಗೆ ಖರ್ಚಾಗಿರುವ ವೆಚ್ಚ ಎಷ್ಟು; ಪೂರ್ಣಗೊಳಿಸಬೇಕಾಗಿರುವ ಮೊತ್ತ ಎಷ್ಟು; ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ;

(ಆ) ಕಾಮಗಾರಿಗಳು ಭಾರಿ ನಿಧಾನಗತಿಯಿಂದ ನಡೆಯುತ್ತಿರುವುದರಿಂದ ನಗರದಲ್ಲಿ ಪರಿಸರವು ಧೂಳಿನಿಂದ ಕಲುಷಿತಗೊಂಡಿದ್ದು, ಸಾರ್ವಜನಿಕರು, ಅಂಗಡಿ ಮುಂಗಟ್ಟುಗಳವರು, ವಾಹನ ಚಾಲಕರು, ಪೊಲೀಸರು ಮಾಸ್ಕ್ ಹಾಕಿಕೊಂಡೇ ಓಡಾಡುವ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಆಸ್ತಮಾ ಹಾಗೂ ಅಲರ್ಜಿಕ್ ರೋಗ ಲಕ್ಷಣಗಳನ್ನು ಹೊಂದಿರುವ ಬಹುತೇಕ ಜನರು ಶ್ವಾಸಕೋಶದ ನಾನಾ ತರಹದ ಕಾಯಿಲೆಗಳಿಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತ್ವರಿತಗತಿಯಲ್ಲಿ ಕಾಮಗಾರಿಗಳನ್ನು ಮುಕ್ತಾಯಗೊಳಿಸಲು ಕ್ರಮ ವಹಿಸಲಾಗುವುದೇ?

## ಸಹಕಾರಿ ಕ್ಷೇತ್ರದಲ್ಲಿ ಮಹಿಳೆಯರು ಮತ್ತು ವಿಕಲಚೇತನರು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)**:-

೪೭ (೧೧೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಹಕಾರಿ ಕ್ಷೇತ್ರದಲ್ಲಿ ಮಹಿಳೆಯರು ಮತ್ತು ವಿಕಲಚೇತನರನ್ನು ಸದಸ್ಯರನ್ನು ಮಾಡುವ ಸಲುವಾಗಿ ಸರ್ಕಾರ ಘೋಷಣೆ ಮಾಡಿರುವ ಪ್ರಿಯದರ್ಶಿನಿ ಮತ್ತು ಆಶಾಕಿರಣ ಯೋಜನೆಗಳ ಫಲಾನುಭವಿಗಳು ಎಷ್ಟು; (ಈವರೆಗಿನ ಫಲಶೃತಿಗಳ ವಿವರಗಳನ್ನು ನೀಡುವುದು)

(ಆ) ಈ ಯೋಜನೆಗಳ ಪ್ರಚಾರ ಮತ್ತು ಅನುಷ್ಠಾನಕ್ಕೆ ಅನುದಾನದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು?

## ಶಿರಾಡಿ ಘಾಟಿನ ದುರಸ್ತಿಯ ೨ನೇ ಹಂತದ ಕಾಮಗಾರಿಯ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**:-

೪೮ (೧೧೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) **ಶಿರಾಡಿ ಘಾಟ್‌ನ** ದುರಸ್ತಿಯ ೨ನೇ ಹಂತದ ಕಾಮಗಾರಿಯು ವಿಳಂಬಗೊಳ್ಳಲು ಕಾರಣವೇನು; ೨ನೇ ಹಂತದ ಕಾಮಗಾರಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು; ಈ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ; (ವಿವರ ಒದಗಿಸುವುದು)

(ಆ) **ಶಿರಾಡಿ ಘಾಟ್‌ನಲ್ಲಿ** ಸುರಂಗ ಮಾರ್ಗ ರಚಿಸಲು ಸರ್ಕಾರದ ಮುಂದೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; ಸಲ್ಲಿಸಲಾಗಿದ್ದಲ್ಲಿ, ಈ ಪ್ರಸ್ತಾವನೆಗೆ ತಗಲುವ ವೆಚ್ಚ ಎಷ್ಟು; ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ; (ವಿವರ ಒದಗಿಸುವುದು)

(ಇ) **ಶಿರಾಡಿ ಘಾಟ್‌ನ** ಪ್ರಥಮ ಹಂತದ ಕಾಮಗಾರಿಗೆ ಖರ್ಚು ಮಾಡಿದ ವೆಚ್ಚ ಎಷ್ಟು; ಯಾವ ಯಾವ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಲಾದ ರಸ್ತೆಗಳಿಗೆ ಮೀಸಲಿಟ್ಟ ಅನುದಾನದ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**:-

೪೯ (೧೧೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಈ ರಸ್ತೆಗಳಿಗೆ ಮೀಸಲಿಟ್ಟ ಅನುದಾನ ಎಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಎಷ್ಟು ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಬಿಡುಗಡೆಗೊಳಿಸಿದ ಅನುದಾನ ಎಷ್ಟು; ಈ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ; (ವಿವರ ಒದಗಿಸುವುದು)

(ಇ) ಲೋಕೋಪಯೋಗಿ ರಸ್ತೆಗಳಾಗಿ ಮೇಲ್ದರ್ಜೆಗೇರಿಸಿದ ನಂತರ ಇಲಾಖೆಯ ಮುಂದಿರುವ ಪ್ರಸ್ತಾವನೆಗಳಾವುವು? (ವಿವರ ಒದಗಿಸುವುದು)

## ಅಡಿಕೆ ಬೆಳೆಗಾರರ ಮಂಡಳಿ ರಚಿಸುವ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):-**

೫೦ (೧೧೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರಿಗೆ ಪ್ರೋತ್ಸಾಹ ನೀಡಲು ಮತ್ತು ಉತ್ಪನ್ನಗಳಿಗೆ ಹೆಚ್ಚು ಬೇಡಿಕೆ ಒದಗಿಸಲು ಅಡಿಕೆ ಬೆಳೆಗಾರರ ಮಂಡಳಿ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ಒದಗಿಸುವುದು)

(ಆ) ಅಡಿಕೆ ಕೃಷಿಗೆ ಕೊಳೆ ರೋಗ ತಗುಲಿ ಆದ ನಷ್ಟಕ್ಕೆ ಅಡಿಕೆ ಬೆಳೆಗಾರರಿಗೆ ರಾಜ್ಯ ಸರ್ಕಾರವು ನೀಡಿದ ಒಟ್ಟು ಪರಿಹಾರ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕೇಂದ್ರ ಸರ್ಕಾರದಿಂದ ಪರಿಹಾರ ಧನವನ್ನು ಒದಗಿಸಲಾಗಿದೆಯೇ? (ವಿವರ ಒದಗಿಸುವುದು)

## ರಾಜ್ಯದಲ್ಲಿ ರಬ್ಬರ್ ಬೆಳೆಗಾರರಿಗೆ ಪ್ರೋತ್ಸಾಹ ಬೆಲೆ ನಿಗಧಿ ಮಾಡುವ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೫೧ (೧೧೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ರಬ್ಬರ್ ಬೆಳೆಗೆ ಸರ್ಕಾರ ಪ್ರೋತ್ಸಾಹ ನೀಡುತ್ತಿರುವ ವಿವಿಧ ಯೋಜನೆಗಳು ಯಾವುವು; ರಾಜ್ಯದಲ್ಲಿ ಎಷ್ಟು ಎಕರೆ ರಬ್ಬರ್ ಬೆಳೆಯನ್ನು ಬೆಳೆಸಲಾಗುತ್ತದೆ; ಇದರಿಂದ ಉತ್ಪಾದಿಸುವ ರಬ್ಬರ್ ಎಷ್ಟು; (ವಿವರ ಒದಗಿಸವುದು)

(ಆ) ಕೇರಳ ಮಾದರಿಯಲ್ಲಿ ರಬ್ಬರ್ ಬೆಳೆಗಾರರಿಗೆ ಪ್ರೋತ್ಸಾಹ ಬೆಳೆಯನ್ನು ನಿಗಧಿ ಮಾಡಲು ಸರ್ಕಾರದ ಮುಂದೆ ಬೇಡಿಕೆ ಇಡಲಾಗಿದೆಯೇ; ಈ ಬೇಡಿಕೆಯನ್ನು ಸರ್ಕಾರ ಪರಿಗಣಿಸಿದೆಯೇ; (ವಿವರ ಒದಗಿಸವುದು)

(ಇ) ರಬ್ಬರ್ ಬೆಳೆ ಕುಸಿತ ಆದಾಗ ಕೇಂದ್ರ ಸರ್ಕಾರದಿಂದ ನೆರವು ಕೇಳಲಾಗಿದೆಯೇ; (ವಿವರ ಒದಗಿಸುವುದು)

(ಈ) ರಾಜ್ಯ ಸರ್ಕಾರವು ರಬ್ಬರ್ ಉತ್ಪನ್ನಗಳಿಗೆ ಶೇಕಡ ಎಷ್ಟು ತೆರಿಗೆಯನ್ನು ವಿಧಿಸಲಾಗುತ್ತಿದೆ; ಇದರಿಂದ ಬರುವ ಒಟ್ಟು ಆದಾಯ ಎಷ್ಟು? (ವಿವರ ನೀಡುವುದು)

## ಹೊಸದಾಗಿ ಘೋಷಿಸಿರುವ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೨ (೧೨೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸದಾಗಿ ಘೋಷಿಸಿರುವ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಹೊಸದಾಗಿ ಘೋಷಿಸಿರುವ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ೨೦೧೫-೧೬ನೇ ಸಾಲಿನಲ್ಲಿ ಮಂಜೂರಾದ ಅನುದಾನವೆಷ್ಟು; ಪಂಚಾಯಿತಿ ಕಾರ್ಯಾಲಯಕ್ಕಾಗಿ ಸ್ವಂತ ಕಟ್ಟಡ ಮತ್ತು ಅಗತ್ಯ ಮೂಲ ಸೌಕರ್ಯಗಳನ್ನು ಯಾವ ಕಾಲಮಿತಿಯಲ್ಲಿ ಪೂರೈಸಲಾಗುವುದು;

(ಇ) ಈ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಅವಶ್ಯವಿರುವ ಹುದ್ದೆಗಳನ್ನು ಭರ್ತಿ ಮಾಡಲು ಏನು ಕ್ರಮ ಕೈಗೊಳ್ಳಲಾಗಿದೆ; ಹಿರಿಯ ಇಂಜಿನಿಯರ್, ಕಿರಿಯ ಇಂಜಿನಿಯರ್, ಪ್ರ-ದರ್ಜೆ, ದ್ವಿ-ದರ್ಜೆ, ಸಹಾಯಕ ಹುದ್ದೆಗಳು ಮತ್ತು ಡಿ-ದರ್ಜೆ ನೌಕರರನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲಾಗುತ್ತದೆ ಮತ್ತು ಯಾವ ರೀತಿ ಭರ್ತಿ ಮಾಡಲು ಸರ್ಕಾರ ಯೋಚಿಸಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳನ್ನು ಘೋಷಿಸಲಾಗಿದೆ; ಅವುಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯ, ಸ್ವಂತ ಕಟ್ಟಡ ಮತ್ತು ಸಿಬ್ಬಂದಿ ಕೊರತೆಯನ್ನು ಯಾವ ಕಾಲಮಿತಿಯಲ್ಲಿ ಪೂರೈಸಲಾಗುತ್ತದೆ?

## ಬೆಳಗಾವಿ ಸಮೀಪದ ೪೮ ಜಂಕ್ಷನ್‌ನಿಂದ ರಾಯಚೂರು ಬಳಿಯ ಎನ್‌ಹೆಚ್ ೧೬೭ ರಸ್ತೆಯನ್ನು ಮೇಲ್ದರ್ಜೆಗೆ ಏರಿಸಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩ (೧೨೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಸಮೀಪದ ೪೮ ಜಂಕ್ಷನ್‌ನಿಂದ ರಾಯಚೂರು ಬಳಿಯ ಎನ್.ಹೆಚ್.೧೬೭ ಜಂಕ್ಷನ್‌ವರೆಗೆ ಬಾಗಲಕೋಟೆ ಮೂಲಕ ಹಾದು ಹೋಗುವ ೩೩೬ ಕಿ.ಮೀ. ಉದ್ದದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಿದ್ದು, ಸದರಿ ಕಾಮಗಾರಿಯ ಪ್ರಗತಿಯು ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಗೆ ತಗಲುವ ಅಂದಾಜು ವೆಚ್ಚವೆಷ್ಟು;

(ಇ) ಕಾಮಗಾರಿಯ ಗುತ್ತಿಗೆಯನ್ನು ಯಾರಿಗೆ ನೀಡಲಾಗಿದೆ;

(ಈ) ಸದರಿ, ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ?

## ಐಇಆ ಬಲ್ಬ್‌ಗಳನ್ನು ಅಳವಡಿಸಿಕೊಳ್ಳುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪ (೧೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಲ್ಲಾ ಮನೆಗಳಲ್ಲಿ ಎಲ್.ಇ.ಡಿ. ಬಲ್ಬ್ ಅಳವಡಿಸಿಕೊಳ್ಳಲು ಸರ್ಕಾರ ಚಾಲನೆ ನೀಡಿರುವುದು ನಿಜವೇ;

(ಆ) ನಿಜವಾಗಿದ್ದಲ್ಲಿ, ಎಲ್.ಇ.ಡಿ. ಬಲ್ಬ್‌ಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಇದರ ಉಪಯೋಗವನ್ನು ಸಾರ್ವಜನಿಕರು ಯಾವ ರೀತಿ ಪಡೆದುಕೊಳ್ಳಬಹುದು;

(ಇ) ರಾಜ್ಯದ ಎಲ್ಲಾ ವರ್ಗದ ಜನರಿಗೆ ಈ ಸೌಲಭ್ಯ ಕಲ್ಪಿಸಲಾಗುತ್ತದೆಯೇ; ಅಥವಾ ಕೇವಲ ಹಿಂದುಳಿದ ವರ್ಗದವರಿಗೆ ಮತ್ತು ಬಿ.ಪಿ.ಎಲ್. ಕಾರ್ಡುದಾರರಿಗೆ ಮಾತ್ರವೇ;

(ಈ) ಸರ್ಕಾರದ ತೀರ್ಮಾನ ಎಲ್.ಇ.ಡಿ. ಬಲ್ಬ್‌ಗಳನ್ನು ವಿತರಿಸುವುದಾದರೆ ಗ್ರಾಮೀಣ ಭಾಗದ ಜನರು ಈ ಸೌಲಭ್ಯವನ್ನು ಎಲ್ಲಿ ಪಡೆದುಕೊಳ್ಳಬೇಕು ನಗರ ವಾಸಿಗಳಿಗೆ ಇರುವ ಅವಕಾಶಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಕಬ್ಬು ಬೆಳೆಗಾರರಿಗೆ ರೈತರಿಗೆ ಎಫ್.ಆರ್.ಪಿ. ನೀಡುವಲ್ಲಿ ತೊಂದರೆಯಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೫೫ (೧೨೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ:-

(ಅ) ಕಳೆದ ವರ್ಷ ರಾಜ್ಯದ ಕಬ್ಬು ಬೆಳೆಗಾರ ರೈತರಿಗೆ ಎಫ್.ಆರ್.ಪಿ. ನೀಡುವಲ್ಲಿ ತೊಂದರೆಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕೇಂದ್ರ ಸರ್ಕಾರ ನಮ್ಮ ರಾಜ್ಯಕ್ಕೆ ಈ ವಿಚಾರವಾಗಿ ನೀಡಿದ ವಿಶೇಷ ಪ್ಯಾಕೇಜ್ (Interest Free Loan) ಮೊತ್ತ ಎಷ್ಟು;

(ಆ) ರಾಜ್ಯದ ಎಷ್ಟು ಕಾರ್ಖಾನೆಗಳು ಈ ಉಪಯೋಗವನ್ನು ಪಡೆದುಕೊಂಡಿವೆ ಹಾಗೂ ಉಪಯೋಗಿಸಿಕೊಳ್ಳದೆ ಇರುವ ಕಾರ್ಖಾನೆಗಳು ಎಷ್ಟು;

(ಇ) ಎಫ್.ಆರ್.ಪಿ. ಪ್ರಕಾರ ರೈತರಿಗೆ ಕಬ್ಬಿನ ಬಾಕಿ ಪಾವತಿಸದೆ ಇರುವ ಕಾರ್ಖಾನೆಗಳು ಎಷ್ಟು; ಅಂತಹವರಗಳ ಮೇಲೆ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಈ ಬಾಕಿಯನ್ನು ಪಾವತಿಸಲಾಗುವುದು? (ಕಾರ್ಖಾನೆವಾರು ಮೊತ್ತದ ವಿವರ ನೀಡುವುದು)

## ಎಲ್.ಇ.ಡಿ. ಬಲ್ಬ್ ಬಳಕೆಯ ಬಗ್ಗೆ

**ಶ್ರೀಮತಿ ವಿಮಲಾಗೌಡ** (ವಿಧಾನಸಭೆಯಿಂದ ಚುನಾಯಿತರಾದವರು):–

೫೬ (೧೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಇಂಧನ ಇಲಾಖೆವತಿಯಿಂದ ವಿದ್ಯುತ್ ಉಳಿಸುವ ಸಲುವಾಗಿ ಎಲ್.ಇ.ಡಿ. ಬಲ್ಬ್‌ಗಳನ್ನು ಅಬ್ಬರದ ಪ್ರಚಾರದ ಮೂಲಕ ಬಿಡುಗಡೆಗೊಳಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಸರ್ಕಾರ ಇದಕ್ಕೆ ಭರಿಸಿದ ವೆಚ್ಚವೆಷ್ಟು; (ವಿವರ ನೀಡುವುದು)

(ಇ) ಈ ಎಲ್.ಇ.ಡಿ. ಬಲ್ಬ್‌ಗಳನ್ನು ಪ್ರಚಾರದ ಮೂಲಕ ಸರ್ಕಾರ ಜನಪ್ರಿಯತೆಗೊಳಿಸುವ ಮುನ್ನ ಕೈಗೊಂಡ ಸಾಧಕ–ಬಾಧಕಗಳ ಕ್ರಮಗಳೇನು; (ವಿವರ ನೀಡುವುದು)

(ಈ) ಈ ಎಲ್.ಇ.ಡಿ. ಬಲ್ಬ್‌ಗಳನ್ನು ತಯಾರಿಸಲು ಸರ್ಕಾರದಿಂದ ವೆಚ್ಚ ಮಾಡಿದ ಮೊತ್ತವೆಷ್ಟು ಹಾಗೂ ಎಲ್.ಇ.ಡಿ.ಗಳ ಒಟ್ಟು ಸಂಖ್ಯೆ ಎಷ್ಟು;

(ಉ) ಈ ಬಲ್ಬ್‌ನ ಕಿರಣಗಳು ಕಣ್ಣಿನ ಅಕ್ಷಿಪಟಲ (ರೆಟಿನಾ)ವನ್ನೇ ಶಾಶ್ವತವಾಗಿ ಗಾಸಿಗೊಳಿಸುವುದನ್ನು ಕರ್ನಾಟಕ ಆಪ್ತ ಲೆಮಿಕ್ ಸೊಸೈಟಿಯ ವೈದ್ಯರ ಅಧ್ಯಾಯನ ವರದಿ ಇಷ್ಟೊಂದು ಆತಂಕಕಾರಿ ಮಾಹಿತಿ ಬಹಿರಂಗಪಡಿಸಿರುವುದರ ಬಗ್ಗೆ ಸರ್ಕಾರದ ನಿಲುವೇನು;

(ಊ) ಈ ಬಲ್ಬ್‌ಗಳ ಮಾನು ಸಂಕುಲ/ಪ್ರಾಣಿ ಪಕ್ಷಿಗಳ ಗಂಭೀರ ಪರಿಣಾಮ ಬೀರುವುದರ ಬಗ್ಗೆ ವೈದ್ಯರು ವಿಜ್ಞಾನಿಗಳ ಅಧ್ಯಾಯನ ವರದಿ ನೀಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಹಾಗಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮವೇನು?

## ರಸ್ತೆ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)**:–

೫೭ (೧೫೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಹೆದ್ದಾರಿ ಸಂಪರ್ಕ ರಸ್ತೆಗಳು ಮತ್ತು ಗ್ರಾಮಾಂತರ ಪ್ರದೇಶಗಳ ರಸ್ತೆಗಳಿಗೆ ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು;

(ಆ) ಇದುವರೆವಿಗೂ ವೆಚ್ಚ ಮಾಡಿರುವ ಅನುದಾನವೆಷ್ಟು; ಎಷ್ಟು ಕಿ.ಮೀ. ಪ್ರದೇಶದ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ;

(ಇ) ಬೀದರ್ ತಾಲ್ಲೂಕಿನ ಸುಮಾರು ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹಾಳಾಗಿದ್ದು ಡಾಂಬರೀಕರಣಗೊಳ್ಳದೆ ಸುಮಾರು ವರ್ಷಗಳಾಗಿದ್ದು, ಈ ರಸ್ತೆಗಳಲ್ಲಿ ಓಡಾಡಲು ಜನರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ರೀತಿ ಕ್ರಮ ಜರುಗಿಸಲಿದೇ? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯ ಕೃಷಿ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)**:-

೫೮ (೧೩೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲಯಲ್ಲಿ ಕೃಷಿ ಇಲಾಖೆಯ ವತಿಯಿಂದ ಅನುಷ್ಠಾನಗೊಂಡ ಯೋಜನೆಗಳು ಯಾವುವು;

(ಆ) ಈ ಯೋಜನೆಗಳಿಗೆ ಸರ್ಕಾರವು ನಿಗದಿಪಡಿಸಿದ ವೆಚ್ಚ ಹಾಗೂ ವ್ಯಯ ಮಾಡಿದ ವೆಚ್ಚವೆಷ್ಟು;

(ಇ) ಸದರಿ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯ ವತಿಯಿಂದ ನೀಡಿರುವ ಸಾಲ ಎಷ್ಟು; ಈ ಸಾಲದಲ್ಲಿ ಮರು ಪಾವತಿಯಾದ ಹಣವೆಷ್ಟು; ಸಾಲ ಮನ್ನಾ ಮಾಡಿದ ಹಣವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಹಾಲು ಉತ್ಪಾದಕರ ಸಹಕಾರ ಸಂಘಗಳ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)**:-

೫೯ (೧೪೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟು; (ತಾಲ್ಲೂಕುವಾರು ಹೆಸರು, ವಿಳಾಸ ಒದಗಿಸುವುದು)

(ಆ) ಹಾಲು ಉತ್ಪಾದಕರಿಗೆ ಈವರೆಗೆ ಪ್ರತಿ ಲೀಟರ್‌ಗೆ ಎಷ್ಟು ರೂ. ಸಹಾಯಧನ ನೀಡಲಾಗುತ್ತಿದೆ; ರೈತರ ಆತ್ಮಹತ್ಯೆಯ ಹಿನ್ನಲೆಯಿಂದ ಧನಸಹಾಯ ಹೆಚ್ಚಿಸಲು ಕ್ರಮ ಕೈಗೊಳ್ಳಬಹುದೇ;

(ಇ) ಬೀದರ್ ಜಿಲ್ಲೆಯಲ್ಲಿ ಇರುವ ಪತ್ತಿನ ಸಹಕಾರ ಸಂಘಗಳು ಎಷ್ಟು; ಹಾಗೇ ಮಹಿಳಾ ಸಹಕಾರ ಸಂಘಗಳು ಎಷ್ಟು? (ಅವುಗಳ ಹೆಸರು, ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ಒದಗಿಸುವುದು)

## ದನಕರುಗಳಿಗೆ ನೀರು / ಮೇವಿನ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)**:--

೬೦ (೧೩೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ವರ್ಷದ ಕಡಿಮೆ ಪ್ರಮಾಣದ ಮಳೆಯಿಂದ ಮುಂದಿನ ದಿನಗಳಲ್ಲಿ ಹಸುಗಳಿಗೆ ಮೇವು ಮತ್ತು ನೀರಿನ ಕೊರತೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ದನ ಕರುಗಳಿಗೆ ಸೂಕ್ತ ಮೇವನ್ನು ಒದಗಿಸಲು ಯಾವ ರೀತಿ ಪೂರ್ವಭಾವಿ ಚಿಂತನೆ ನಡೆಸಿ ಯಾವ ಕ್ರಮ ಕೈಗೊಳ್ಳಲು ಮುಂದಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ನೀರು / ಮೇವಿನ ಕೊರತೆಯ ಅಂದಾಜು ಪ್ರಮಾಣವೆಷ್ಟು? (ವಿವರ ಒದಗಿಸುವುದು)

## ರಾಜ್ಯದಲ್ಲಿ ಭೀಕರ ಬರವಿರುವುದರಿಂದ ರೈತರು ಸಂಕಷ್ಟದಲ್ಲಿರುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ)**:–

೬೧ (೧೩೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ವರ್ಷ ರಾಜ್ಯದಲ್ಲಿ ಭೀಕರ ಬರ ಆವರಿಸಿರುವುದರಿಂದ ರೈತರು ಯಾವುದೇ ರೀತಿಯ ಬೆಳೆಗಳನ್ನು ಬೆಳೆಯದೆ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಂಕಷ್ಟದಲ್ಲಿರುವ ರೈತರಿಗೆ ಆರ್ಥಿಕವಾಗಿ ಸಹಾಯವಾಗಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು;

(ಇ) ಪ್ರಮುಖವಾಗಿ, ರಾಜ್ಯದ ಕೆಲವು ಭಾಗಗಳಲ್ಲಿ ಬಿತ್ತನೆ ಮಾಡಿದ್ದ ರೈತರು ಸಕಾಲಕ್ಕೆ ಮಳೆಬಾರದಿರುವುದರಿಂದ ಬೆಳೆಗಳು ಮೊಳಕೆಯೊಡೆಯುವ ಹಂತದಲ್ಲಿಯೇ, ಬಾಡಿಹೋಗಿದ್ದು ಹಾಗೂ ಕೆಲವು ಕಡೆಗಳಲ್ಲಿ ಮಳೆಯೇ ಬಾರದಿರುವುದರಿಂದ ಈ ವರ್ಷ ಬಿತ್ತನೆಯೇ ಮಾಡಿರುವುದಿಲ್ಲ. ಇಂತಹ ಸನ್ನಿವೇಶದಲ್ಲಿ ಸಂಕಷ್ಟದಲ್ಲಿರುವ ರೈತರಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ರೈತರು ಸಹಕಾರ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾಡಿರುವ ಸಾಲವನ್ನು ಮನ್ನಾ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

## ಭಾಗ್ಯಲಕ್ಷ್ಮಿ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸಿದ್ದ ಸಿಬ್ಬಂದಿಗಳಿಗೆ BACK ARREARS ನೀಡುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** (ಪದವೀಧರರ ಕ್ಷೇತ್ರ):-

೬೨ (೧೩೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಭಾಗ್ಯಲಕ್ಷ್ಮಿ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಲೈಲಾ ಶುಗರ್ಸ್‌ಗೆ ಗುತ್ತಿಗೆ ನೀಡಲಾಗಿದ್ದು ಯಾವಾಗ; ಎಷ್ಟು ವರ್ಷಗಳ ಅವಧಿಗೆ ಗುತ್ತಿಗೆ ಕೊಡಲಾಯಿತು.

(ಆ) ಗುತ್ತಿಗೆ ನೀಡುವ ಸಂದರ್ಭದಲ್ಲಿ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗೆ Back Arrears ಕೊಡಬೇಕೆಂದು ಒಪ್ಪಂದವಾಗಿರುವುದು ನಿಜವಲ್ಲವೇ; ಈಗಾಗಲೇ ಸ್ವಯಂ ನಿವೃತ್ತಿ ತೆಗೆದುಕೊಂಡ ಸಿಬ್ಬಂದಿಗಳಿಗೆ ಎಷ್ಟು ಹಣವನ್ನು ಕೊಡಲಾಗಿದೆ;

(ಇ) ಒಪ್ಪಂದದ ಪ್ರಕಾರ ಅಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗೆ ಎಷ್ಟು ಹಣವನ್ನು Back Arrears ರೂಪದಲ್ಲಿ ಕೊಡಬೇಕಾಗಿದೆ; ಅದನ್ನು ಯಾವಾಗ ಕೊಡಲಾಗುವುದು?

## ಕೃಷಿ ಮತ್ತು ತರಕಾರಿ ಮಾರುಕಟ್ಟೆಗಳನ್ನು ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಬೈಲಹೊಂಗಲ ಕ್ಷೇತ್ರ):–**

೬೩ (೧೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿರುವ ಕೃಷಿ ಮಾರುಕಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಮೂರು ಜಿಲ್ಲೆಗಳಲ್ಲಿನ ಕೃಷಿ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯೋಜನೆ ರೂಪಿಸಲಾಗಿದೆಯೇ;

(ಇ) ರೂಪಿಸಲಾಗಿದ್ದಲ್ಲಿ, ಈ ಮೂರು ಜಿಲ್ಲೆಗಳಲ್ಲಿನ ಕೃಷಿ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?

# ಪಶುವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವುದು ಮತ್ತು ಹೊಸ ಪಶು ಆಸ್ಪತ್ರೆಗಳನ್ನು ತೆರೆಯುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** (ಪದವೀಧರರ ಕ್ಷೇತ್ರ):-

೬೪ (೧೩೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಮಂಜೂರಾದ ಪಶು ವೈದ್ಯರ ಹುದ್ದೆಗಳೆಷ್ಟು; ಆ ಪೈಕಿ ಖಾಲಿಯಿರುವ ಹುದ್ದೆಗಳೆಷ್ಟು;

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಪಶುಗಳಿಗೆ ಸೂಕ್ತ ಸಮಯದಲ್ಲಿ ಸೂಕ್ತ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು;

(ಈ) ರಾಜ್ಯದಲ್ಲಿ ಇನ್ನೂ ಹೆಚ್ಚಿನ ಪಶು ಆಸ್ಪತ್ರೆಗಳ ಅವಶ್ಯಕತೆ ಇರುವುದರಿಂದ, ಹಾಲಿ ಇರುವ ಪಶು ಆಸ್ಪತ್ರೆಗಳನ್ನು ಹೊರತುಪಡಿಸಿ, ಅವಶ್ಯವಿರುವ ಕಡೆ ಇನ್ನೂ ಹೊಸದಾಗಿ ಪಶು ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

(ಉ) ಇದ್ದಲ್ಲಿ, ರಾಜ್ಯದ ಯಾವ ಯಾವ ಕಡೆಗಳಲ್ಲಿ ಹೊಸದಾಗಿ ಪಶು ಆಸ್ಪತ್ರೆಗಳನ್ನು ತೆರೆಯಲು ಉದ್ದೇಶಿಸಲಾಗಿದೆ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ / ತಾಲ್ಲೂಕಿನ ಹಿರೇಬಾಗೇವಾಡಿ ಗ್ರಾಮದ ಉರ್ದು ಹೆಣ್ಣು ಮಕ್ಕಳ ಶಾಲೆಗೆ ಇನ್ನು ನಾಲ್ಕು ಹೆಚ್ಚುವರಿ ಕೊಠಡಿ ನಿರ್ಮಾಣ ಮತ್ತು ಮೂಲಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):-**

೬೫ (೧೩೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ ಹಿರೆಬಾಗೇವಾಡಿ ಗ್ರಾಮದಲ್ಲಿ ಸರ್ಕಾರಿ ಉರ್ದು ಹೆಣ್ಣು ಮಕ್ಕಳ ಶಾಲೆಗೆ ಇನ್ನೂ ನಾಲ್ಕು ಶಾಲಾ ಕೊಠಡಿಗಳ ನಿರ್ಮಾಣ, ನೈರ್ಮಲ್ಯ ಮತ್ತು ಶುದ್ಧ ಕುಡಿಯುವ ನೀರಿನ ಯೋಜನೆ ಅವಶ್ಯವಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ವರ್ಷ ಶಿಕ್ಷಣ ಇಲಾಖೆಯವರು ಇಲ್ಲಿ ಶಾಲಾ ಕೊಠಡಿಗಳ ಅವಶ್ಯವಿರುವುದನ್ನು ಮನಗಂಡು ಕೇವಲ ಮೂರು ಶಾಲಾ ಕೊಠಡಿಗಳನ್ನು ಮಂಜೂರು ಮಾಡಿದ್ದು, ಆ ಕಟ್ಟಡಗಳು ವಿದ್ಯಾರ್ಥಿಗಳಿಗೆ ಸಾಕಾಗುತ್ತಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಆ ಗ್ರಾಮದ ಮುಸಲ್ಮಾನ ಹಿರಿಯರು ಹಾಗೂ ಶ್ರೀ ಸೈಯ್ಯದ್ ಆದಂ ಎಸ್. ಖಾದ್ರಿ ಹಿರೆಬಾಗೇವಾಡಿ ದರ್ಗಾ ಶರೀಫ್ ಇವರು ಕೋಟ್ಯಾಂತರ ರೂ. ಬೆಲೆ ಬಾಳುವ ಜಾಗವನ್ನು ಸರ್ಕಾರಕ್ಕೆ ಹೆಣ್ಣು ಮಕ್ಕಳ ಶಾಲೆಯನ್ನು ಕಟ್ಟುವ ಸಲುವಾಗಿ ದಾನವಾಗಿ ಕೊಟ್ಟ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಲ್ಲಿ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚು ಇದ್ದು, ಶಾಲಾ ಕೋಣೆಗಳ ಕೊರತೆಯಿಂದ ವಿದ್ಯಾರ್ಥಿನಿಯರು ಶಾಲೆ ಬಿಟ್ಟು ಮನೆಯಲ್ಲಿಯೇ ಉಳಿದು ಶಿಕ್ಷಣದಿಂದ ವಂಚಿತರಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬೆಳಗಾವಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಒಂದು ಶಾಲಾ ಕೊಠಡಿಗಳ ಕಟ್ಟಡ, ನೈರ್ಮಲ್ಯ ಹಾಗೂ ಶುದ್ಧ ಕುಡಿಯುವ ನೀರಿನ ಯೋಜನೆ ಕೈಗೊಳ್ಳದೇ ಇದ್ದ ಸಂಗತಿ ನಿಜವೇ;

(ಉ) ೨೦೧೫-೧೬ನೇ ಸಾಲಿನಲ್ಲಿ ಈ ಕೆಲಸಕ್ಕೆ ಆಯವ್ಯಯದಲ್ಲಿ ಎಷ್ಟು ಹಣ ಒದಗಿಸಲಾಗಿದೆ; ಹಾಗೂ ಅದರಲ್ಲಿ ಬೆಳಗಾವಿ ಜಿಲ್ಲೆಗೆ ಬಿಡುಗಡೆಯಾಗಿರುವ ಹಣ ಎಷ್ಟು; (ವಿವರ ನೀಡುವುದು) ಆ ಪೈಕಿ ಬೆಳಗಾವಿ ಜಿಲ್ಲೆಯ ಹಿರೆಬಾಗೇವಾಡಿ ಸರ್ಕಾರಿ ಉರ್ದು ಹೆಣ್ಣು ಮಕ್ಕಳ ಶಾಲೆಗೆ ಇನ್ನೂ ನಾಲ್ಕು ಶಾಲಾ ಕೊಠಡಿಗಳು ನಿರ್ಮಾಣ, ನೈರ್ಮಲ್ಯ ಮತ್ತು ಶುದ್ಧ ಕುಡಿಯುವ ನೀರಿನ ಯೋಜನೆ ಕೈಗೊಳ್ಳಲಾಗುವುದೇ?

## ಹೈದ್ರಾಬಾದ್ ಕರ್ನಾಟಕ ೬ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು

**ಶ್ರೀ ಅಮರನಾಥ ಪಾಟೀಲ** (ಪದವೀಧರರ ಕ್ಷೇತ್ರ):-

೬೬ (೧೪೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೩ ವರ್ಷಗಳಲ್ಲಿ ಹೈದ್ರಾಬಾದ್ ಕರ್ನಾಟಕ ೬ ಜಿಲ್ಲೆಗಳಲ್ಲಿ ಹಾಗೂ ಹರಪನಹಳ್ಳಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು ಎಷ್ಟು; ಕೈಗೊಂಡ ಕಾಮಗಾರಿಗಳ ಪೈಕಿ ನಿಗದಿತ ಅವಧಿಯಲ್ಲಿ ಪೂರ್ಣಗೊಂಡ ಹಾಗೂ ಅಪೂರ್ಣಗೊಂಡ ಕಾಮಗಾರಿಗಳು ಎಷ್ಟು; (ಜಿಲ್ಲಾವಾರು, ವರ್ಷವಾರು ಕಾಮಗಾರಿವಾರು (ಪೂರ್ಣ ಹಾಗೂ ಅಪೂರ್ಣ) ಹಾಗೂ ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು;

(ಆ) ನಿಗದಿತ ಅವಧಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಇರುವ ಗುತ್ತಿಗೆದಾರರನ್ನು ಸ್ವಂತ ವೆಚ್ಚದ ಮೇಲೆ ರಿಸ್ಕ್ & ಕಾಸ್ಟ ಆಧಾರದಲ್ಲಿ ರಿಸೆಂಡ್ ಮಾಡಲಾಗಿದೆ; (ಜಿಲ್ಲಾವಾರು, ಕಾಮಗಾರಿವಾರು ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

(ಇ) ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸದೆ ರಿಸ್ಕ್ & ಕಾಸ್ಟ್ ಆಧಾರದ ಮೇಲೆ ರಿಸೆಂಡ್ ಮಾಡಿರುವ ಗುತ್ತಿಗೆದಾರರ ಮೇಲೆ ಕೈಗೊಂಡಿರುವ ಕ್ರಮಗಳೇನು; ಸದರಿ ಗುತ್ತಿಗೆದಾರರು ಪುನಃ ಇಲಾಖೆಯಲ್ಲಿ ಕಾಮಗಾರಿಗಳನ್ನು ತೆಗೆದುಕೊಳ್ಳಲು ನಿಯಮಗಳ ಪ್ರಕಾರ ಅರ್ಹರಾಗಿರುತ್ತಾರೆಯೇ; (ಮಾಹಿತಿ ನೀಡುವುದು)

(ಈ) ಮೇಲ್ಕಾಣಿಸಿದ ನಿಯಮಗಳ ಉಲ್ಲಂಘನೆಯ ಆಧಾರದ ಮೇಲೆ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):-**

೬೭ (೧೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಗರಾಭಿವೃದ್ಧಿ ಇಲಾಖೆಯಿಂದ ಪುರಸಭೆ, ನಗರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರ ಹುದ್ದೆಯನ್ನು ಹತ್ತು ವರ್ಷಗಳಿಂದ ನೇಮಕಾತಿ ಮಾಡದ ಕಾರಣ ಎರಡು ವರ್ಷ ವಯೋಮಿತಿ ಸಡಿಲಿಕೆ ನೀಡಿದ ನಂತರ ನೇಮಕಾತಿ ಮಾಡಿಕೊಳ್ಳುವ ಕುರಿತು ಸರ್ಕಾರ ಚಿಂತಿಸಿದೆಯೇ;

(ಆ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಆಗಿರುವ ವಿದ್ಯುತ್ ಉತ್ಪಾದನ, ಕಳ್ಳತನ ಮತ್ತು ಸೋರಿಕೆ ಪ್ರಮಾಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೬೮ (೧೪೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು; (ವರ್ಷವಾರು, ಮೂಲವಾರು ಮಾಹಿತಿ ನೀಡುವುದು)

(ಆ) ಕಳೆದ ಐದು ವರ್ಷದಲ್ಲಿ ಆಗಿರುವ ವಿದ್ಯುತ್ ಕಳ್ಳತನ ಹಾಗೂ ಸೋರಿಕೆ (Distribution Loss) ಪ್ರಮಾಣ ಹಾಗೂ ಮೌಲ್ಯ ಎಷ್ಟು; ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟ ಎಷ್ಟು; (ವರ್ಷವಾರು, ಶೇಕಡಾವಾರು ವಿವರ ನೀಡುವುದು)

(ಇ) ಕಳ್ಳತನ ಹಾಗೂ ಸೋರಿಕೆ ಪ್ರಕರಣಗಳನ್ನು ತಡೆಯಲು ಕೈಗೊಂಡ ಕಾರ್ಯಗಳು ಯಾವುವು; ಇದಕ್ಕೆ ತಗುಲಿದ ವೆಚ್ಚ ಎಷ್ಟು; (ವರ್ಷವಾರು ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಸದರಿ ಕ್ರಮಗಳಿಂದ ವಿದ್ಯುತ್ ಕಳ್ಳತನ ಹಾಗೂ ಸೋರಿಕೆ ಪ್ರಮಾಣ ಕಡಿಮೆ ಆಗಿದೆಯೇ?

## ಕಲಬುರಗಿ ವಿಮಾನ ನಿಲ್ದಾಣ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):-**

೬೯ (೧೫೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ವಿಮಾನ ನಿಲ್ದಾಣ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಹಂತದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಯಲ್ಲಿ ಕಾನೂನಿನ ಹಾಗೂ ವಿನ್ಯಾಸ ತೊಡಕುಗಳು ಇವೆಯೇ; ಇದ್ದರೆ, ಸಂಪೂರ್ಣ ವಿವರ ನೀಡುವುದು;

(ಇ) ಸದರಿ ಯೋಜನೆಯು ಅರ್ಧಕ್ಕೆ ನಿಂತಿದ್ದು, ಕಾಮಗಾರಿ ಪ್ರಾರಂಭಿಸಲಾಗುವುದು ಯಾವಾಗ ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು)

## ಸೌರ ವಿದ್ಯುತ್ ಯೋಜನೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೭೦ (೧೫೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದಲ್ಲಿ ಸೌರವಿದ್ಯುತ್ ಯೋಜನೆ ಜಾರಿಗೊಂಡಿದ್ದು ಯಾವಾಗ;

(ಆ) ಸೌರ ವಿದ್ಯುತ್ ಯೋಜನೆಯಡಿ ಕರ್ನಾಟಕಕ್ಕೆ ಎಷ್ಟು ಮೆಗಾವ್ಯಾಟ್ ವಿದ್ಯುತ್‌ನ್ನು ಉತ್ಪಾದಿಸಲು ಕೇಂದ್ರ ಸರ್ಕಾರದಿಂದ ಅನುಮತಿ ನೀಡಲಾಗಿದೆ;

(ಇ) ಸದರಿ ಯೋಜನೆಯಡಿ ಎಷ್ಟು ಜನ ರೈತರಿಗೆ ಪವರ್ ಪರ್‌ಚೇಸ್ ಅಗ್ರಿಮೆಂಟ್ (PPA) ನೀಡಲಾಗಿದೆ; (ಜಿಲ್ಲಾವಾರು ರೈತರ ಹೆಸರು ವಿವರಗಳೊಂದಿಗೆ ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ರೈತರಿಂದ ಖರೀದಿಸುವ ಒಂದು ಯೂನಿಟ್ ವಿದ್ಯುತ್‌ಗೆ ನೀಡುವ ಹಣ ಎಷ್ಟು?

## ಮುನಿಸಿಪಾಲಿಟಿ ಪ್ರದೇಶಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೭೧ (೧೫೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೯೮೬ಕ್ಕೆ ಕರ್ನಾಟಕ ಪುರಸಭೆ ಅಧಿನಿಯಮ ೧೯೬೪ಳ ಮತ್ತು ಪೌರನಿಗಮಗಳ ಅಧಿನಿಯಮ ೧೯೭೬ರ ಅನ್ವಯ ಎಷ್ಟು ಮುನಿಸಿಪಾಲಿಟಿ ಪ್ರದೇಶಗಳು ಇದ್ದವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಮುನಿಸಿಪಾಲಿಟಿ ಪ್ರದೇಶಗಳು ಯಾವ ದಿನಾಂಕದಿಂದ ಮುನಿಸಿಪಾಲಿಟಿ ಪ್ರದೇಶಗಳಾಗಿರುತ್ತವೆ; (ವಿವರವಾದ ನೋಟಿಫಿಕೇಷನ್ ಸಂಖ್ಯೆ ಮತ್ತು ದಿನಾಂಕದ ಆದೇಶದ ಪ್ರತಿಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಗ್ರಾಮೀಣ ಪ್ರದೇಶವೇ ಅಥವಾ ಮುನಿಸಿಪಾಲಿಟಿ ಪ್ರದೇಶವೇ ಎಂದು ಸ್ಪಷ್ಟೀಕರಣ ನೀಡುವ ಸಂಬಂಧ ಮುನಿಸಿಪಾಲಿಟಿ ನಿರ್ದೇಶನಾಲಯಕ್ಕೆ ಕಳೆದ ೦೩ ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಿಂದ ಎಷ್ಟು ಪತ್ರಗಳು ಬಂದಿರುತ್ತವೆ; ಅವುಗಳಿಗೆ ನಿರ್ದೇಶನಾಲಯವು ನೀಡಿರುವ ಸ್ಪಷ್ಟೀಕರಣದ ವಿವರವಾದ ಮಾಹಿತಿ ನೀಡುವುದು?

## ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರಿತ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೭೨ (೧೫೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರಿತ ನೇಮಕಾತಿಗಳನ್ನು ಸ್ಥಗಿತಗೊಳಿಸಲಾಗಿದೆಯೇ; ಸ್ಥಗಿತಗೊಳಿಸಿದ್ದಲ್ಲಿ ಇದಕ್ಕೆ ಸಕಾರಣಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಸ್ಥಗಿತಗೊಳಿಸದಿದ್ದರೆ ಕಳೆದ ೧೬ ವರ್ಷಗಳಿಂದ ಅನುಕಂಪ ಆಧಾರಿತ ನೇಮಕಾತಿಗಳನ್ನು ಮಾಡಿಕೊಳ್ಳದಿರಲು ಸಕಾರಣಗಳೇನು; (ವಿವರವಾದ ಮಾಹಿತಿ ಒದಗಿಸುವುದು)

(ಇ) ಅನುಕಂಪ ಆಧಾರಿತ ನೇಮಕಾತಿ ಸಂಬಂಧ ಸರ್ಕಾರ ಕಾಲ ಕಾಲಕ್ಕೆ ಹೊರಡಿಸಿದ ನೀತಿ ನಿಯಮಾವಳಿಗಳೇನು; (ಆದೇಶದ ಪ್ರತಿಗಳೊಂದಿಗೆ ಮಾಹಿತಿ ನೀಡುವುದು)

(ಈ) ಅನುಕಂಪ ಆಧಾರಿತ ನೇಮಕಾತಿಗಳ ಸಂಬಂಧ ಸರ್ಕಾರಿ ಇಲಾಖೆಗಳಿಗೆ ಹಾಗೂ ಸಾರ್ವಜನಿಕ ಉದ್ದಿಮೆಗಳಿಗೆ ಪ್ರತ್ಯೇಕ ನಿಯಮವಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಉ) ಸಾರ್ವಜನಿಕ ಉದ್ದಿಮೆಯ ಮೃತ ನೌಕರನ ಕುಟುಂಬಕ್ಕೆ ಯಾವ ರೀತಿ ನ್ಯಾಯ ಒದಗಿಸಲಾಗುವುದು?

## ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ ರಾಜ್ಯ ರಸ್ತೆ, ಜಿಲ್ಲಾ ರಸ್ತೆಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩(೪೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ರಾಜ್ಯ ರಸ್ತೆ ಮತ್ತು ಜಿಲ್ಲಾ ರಸ್ತೆಗಳ ಸಂಖ್ಯೆ ಎಷ್ಟು; ರಸ್ತೆಗಳ ಹೆಸರಿನ ಜೊತೆಗೆ ಕಿ.ಮೀ.ಗಳ ವಿವರ ನೀಡುವುದು;

(ಆ) ಕಳೆದ ಮೂರು ವರ್ಷಗಳಲ್ಲಿ ಈ ರಸ್ತೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾಗಿರುವ ಹಣ ಎಷ್ಟು; ಖರ್ಚಾಗಿರುವ ಹಣ ಮತ್ತು ಕಾಮಗಾರಿ ನಡೆಸಿದ ರಸ್ತೆಗಳು ಎಷ್ಟು? (ವಿವರ ನೀಡುವುದು)

## ಶಿರಾ ತಾಲ್ಲೂಕು, ಯಲಬಾಗಿಲು ಕಳ್ಳಂಬೆಳ್ಳ ಹಳ್ಳದ ಸೇತುವೆ ದುರಸ್ಥಿ ಬಗ್ಗೆ

**ಶ್ರೀಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೭೪ (೯೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾ ತಾಲ್ಲೂಕು ಪುಟ್ಟೇಗೌಡನಹಳ್ಳಿ, ಯಲಬಾಗಿಲು, ಹಣ್ಣೇಚಿಕ್ಕನಹಳ್ಳಿ, ಯರಮಾನಹಳ್ಳಿ, ಹುನ್ನಾಳು ಅಮಲಗುಂದಿ ಕಡೆಗೆರೆ ಹೋಗುವ ಮಾರ್ಗದ ಯಲಬಾಗಿಲು ಕಳ್ಳಂಬೆಳ್ಳ ಹಳ್ಳದ ಸೇತುವೆ ಎಷ್ಟು ವರ್ಷದಿಂದ ಮುರಿದು ಬಿದ್ದಿದೆ ವಿವರ ನೀಡುವುದು;

(ಆ) ಸುಮಾರು ೧೦--೧೫ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಹಾಗೂ ರಾಷ್ಟ್ರೀಯ ಹೆದ್ದಾರಿ ೪ರ ಶಿರಾ ಚೇಳೂರು ಮಾರ್ಗದ ಒಂದು ಕಿ.ಮೀ. ವ್ಯಾಪ್ತಿಯಲ್ಲಿರುವ ಈ ಸೇತುವೆಯನ್ನು ದುರಸ್ತಿಪಡಿಸಲು ಸರ್ಕಾರಕ್ಕೆ ಇನ್ನು ಬೇಕಾಗಿರುವ ಸಮಯ ಎಷ್ಟು;

(ಇ) ಈ ಪ್ರಮುಖ ರಸ್ತೆಯ ಸೇತುವೆ ಮುರಿದುಬಿದ್ದು, ಇದೇ ಸೇತುವೆ ಮೇಲೆ ಪ್ರಾಣಭೀತಿಯಿಂದ ವಾಹನಗಳು ಸಂಚರಿಸುತ್ತಿದ್ದರೂ, ಸದರಿ ಸೇತುವೆಯನ್ನು ದುರಸ್ತಿಗೊಳಿಸಲು ಸರ್ಕಾರ ನಿರ್ಲಕ್ಷ್ಯ ವಹಿಸಿರುವುದೇಕೆ;

(ಈ) ಇಲ್ಲದಿದ್ದಲ್ಲಿ, ಈ ಸೇತುವೆಯನ್ನು ದುರಸ್ತಿಪಡಿಸಲು ಸರ್ಕಾರ ಕೈಗೊಂಡಿರುವ ಆದ್ಯತಾ ಕ್ರಮಗಳಾವುವು?

## ಕಲಬುರಗಿ ಜಿಲ್ಲೆಯ ಕೃಷಿ ಭೂಮಿ ಕುಸಿತ ತಡೆಗಟ್ಟುವ ಬಗ್ಗೆ

**ಶ್ರೀ ಇಕ್ಬಾಲ್ ಅಹಮದ್** ಸರಡಗಿ (**ನಾಮನಿರ್ದೇಶನ ಹೊಂದಿದವರು**):-

೭೫ (೧೩೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಒಟ್ಟು ಕೃಷಿ ಭೂಮಿಯ ಪ್ರಮಾಣ ಎಷ್ಟು;

(ಆ) ಹಾಗಿದ್ದಲ್ಲಿ, ಕೃಷಿ ಭೂಮಿಯ ಕುಸಿತ ತಡಿಯುವುದಕ್ಕೆ ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ;

(ಇ) ವಿಶೇಷ ಕೃಷಿ ಭೂಮಿ ವಲಯ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದಲ್ಲಿ, ಎಂದು ಸ್ಥಾಪಿಸಲಾಗುವುದು?

**ಕಲಬುರಗಿ ಜಿಲ್ಲೆಯ ರೈತರಿಗೆ ಸಹಾಯ ಧನ ನೀಡುವ ಕುರಿತು**

**ಶ್ರೀ ಇಕ್ಬಾಲ್ ಅಹಮದ್ ಸರಡಗಿ** (ನಾಮನಿರ್ದೇಶನ ಹೊಂದಿದವರು):-

೭೬ (೧೩೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ರೈತರಿಗೆ ಯಾವ ಯಾವ ಕೃಷಿ ಉಪಕರಣಗಳಿಗೆ ಸಹಾಯ ಧನವನ್ನು ನೀಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ಸಹಾಯಧನವನ್ನು ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ; (ಕೃಷಿ ಉಪಕರಣ, ಸಹಾಯ ಧನ ಮೊತ್ತದ ವಿವರ ಒದಗಿಸುವುದು)

(ಇ) ಜಿಲ್ಲೆಗೆ ಹೊಸ ಯೋಜನೆಗಳ ಅಡಿಯಲ್ಲಿ ರೈತ... ...ಹಾಯ ಧನವನ್ನು ನೀಡುವ ಯೋಜನೆ ಸರ್ಕಾರದ ಮುಂದಿ... (ಇದ್ದಲ್ಲಿ ವಿವರ ಒದಗಿಸುವುದು)

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ ಘ-2, ಬೆಂಗಳೂರು-59/ಕಾ.ಸೂ.3666/... ಪ್ರತಿಗಳು/26-02-2016